ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 88 RNI Number : KNKAN/25/A2770 07-04-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :88 ರಾಯಚೂರು 07-04-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಉಪಚುನಾವಣೆ : ಬಹಿರಂಗ ಪ್ರಚಾರಕ್ಕೆ ಇಂದು ತೆರೆ

ಬೆಂಗಳೂರು,ಏ.6-

ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವಿನ ಜಿದ್ದಾಜಿದ್ದಿನ ರಣರಂಗವಾಗಿರುವ ರಾಜ್ಯದ ಎರಡು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಬಹಿ ರಂಗ ಪ್ರಚಾರಕ್ಕೆ ನಾಳೆ ತೆರೆ ಬೀಳ'ಲಿದ್ದು, ಮತದಾರರನ್ನು ಪುಸಲಾಯಿ ಸಲು ಎಲ್ಲಾ ರಾಜಕೀಯ ಪಕ್ಷಗಳು ಇನ್ನಿಲ್ಲದ ಕಸರತ್ತು ನಡೆಸುತ್ತಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವ ಹೆಚ್.ಡಿ .ಕುಮಾರಸ್ವಾಮಿ, ಮಾಜಿ ಸಿಎಂ ಬಸವರಾಜ ಬೊಮಾ ಯಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಕಾಂಗ್ರೆಸ್ ಮತ್ತು ಬಿಜೆಪಿಯ ಘಟಾನುಘಟಿ ನಾಯಕರು ಎರಡೂ ಕಡೆ ತಮ ತಮ್ಮ ಅಭ್ಯರ್ಥಿಗಳ ಪರವಾಗಿ ಮತಯಾಚನೆ ಮಾಡಿದರು.

ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಬಹಿರಂಗ ಪ್ರಚಾರ ನಾಳೆ ಸಂಜೆ 5 ಗಂಟೆಗೆ ಮುಕ್ತಾಯಗೊಳ್ಳಲಿದ್ದು ಗುರುವಾರ ಮತದಾನ ನಡೆಯಲಿದೆ. ಕೊನೆ ಕ್ಷಣದಲ್ಲಿ ಮತದಾರರನ್ನು ಓಲೈಸಿಕೊ ಳ್ಳಲು ಕಾಂಗ್ರೆಸ್ ಮತ್ತು ಬಿಜೆಪಿ ಸೇರಿದಂತೆ ಎಲ್ಲಾ ರಾಜಕೀಯ ಪಕ್ಷಗಳ ಮುಖಂಡರು ಜಿದ್ದಿಗೆ ಬಿದ್ದವರಂತೆ ಸುಡುವ ಬಿಸಿಲನ್ನು ಲೆಕ್ಕಿಸದೆ ಮತಯಾಚನೆ ಮಾಡಿದರು.



ಶತಾಯಗತಾಯ ಎರಡೂ ಕ್ಷೇತ್ರಗಳಲ್ಲಿ ಗೆಲ್ಲಲೇಬೇಕೆಂದು ಜಿದ್ದಿ ಗೆ ಬಿದ್ದಿರುವ ಕಾಂಗ್ರೆಸ್ ತನ್ನ ಪಕ್ಷದ ಅಭ್ಯರ್ಥಿಗಳ ಪರವಾಗಿ ಕಳೆದ ಒಂದು ವಾರದಿಂದ ಭಾರಿ ಪ್ರಚಾರ ನಡೆಸಿ ಮತದಾರರ ಮನವರಿಕೆಗೆ ಇನ್ನಿಲ್ಲದ ಕಸರತ್ತು ನಡೆಸಿದೆ. ಹೇಗಾ ದರೂ ಮಾಡಿ ಉಪಚುನಾವಣ'ೆಯಲ್ಲಿ ಗೆದ್ದು ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕು ಎಂದು ತನ್ನೆಲ್ಲಾ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಮೊದಲ ಬಾರಿಗೆ ಒಗ್ಗಟ್ಟು ಪ್ರದರ್ಶಿ ಸುವ ಮೂಲಕ ಬಿಜೆಪಿ ಎರಡೂ ಕಡೆ ಕೈ ಅಭ್ಯರ್ಥಿಗಳಿಗೆ ಸಮಬಲದ ಪೈಪೋಟಿ ನೀಡುತ್ತಿದೆ.

ರಾಜ್ಯ ಕಾಂಗ್ರೆಸ್ ಸರ್ಕಾರ ಅಧಿ ಕಾರಕ್ಕೆ ಬಂದು ಇನ್ನು ಕೆಲವೇ ದಿನಗ ಳಲ್ಲಿ ಮೂರು ವರ್ಷ ಪೂರ್ಣಗೊಳಿಸಲಿದೆ. ಇದೇ ಸಂದ ರ್ಭದಲ್ಲಿ ಸರ್ಕಾರದ ವರ್ಚಸ್ಸು ಕುಗ್ಗುತ್ತಿದೆ ಎಂಬ ಆರೋಪವೂ ಇದೆ.

ಬಿಜೆಪಿ ಮತ್ತು ಜೆಡಿಎಸ್ ಈ ವಿಚಾರವಾಗಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುತ್ತಿದೆ. ಈ ಕ್ಷಣದಲ್ಲಿ ಚುನಾವಣೆಗೆ ಹೋದರೆ ಕಾಂಗ್ರೆಸ್ ಸೋಲು ಶತಃಸಿದ್ಧ ಎಂದು ಹೇಳುತ್ತಿದೆ. ಆದರೆ ಇದೀಗ ಎರಡು ಕ್ಷೇತ್ರಗಳ ಉಪ ಚುನಾವಣೆಯ ಫಲಿತಾಂಶ ಕಾಂಗ್ರೆಸ್ ಸರ್ಕಾರದ ವರ್ಚಸ್ಸಿ ಗೆ ಅನುಕೂಲ ಅಗಬ ಹುದು.

ಎರಡು ಕ್ಷೇತ್ರಗಳನ್ನು ಗೆದ್ದರೆ ರಾಜ್ಯದಲ್ಲಿ ಅಡಳಿತ ವಿರೋಧಿ ಅಲೆ ಇಲ್ಲ ಎಂದು ಬಿಂಬಿಸಲು ಸಿಎಂ ಸಿದ್ದರಾಮಯ್ಯ ಅವರಿಗೆ ಅನುಕೂಲ ಆಗಲಿದೆ. ಈ ಎರಡು ಉಪ ಚುನಾ ವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸುವುದು ಅನಿವಾರ್ಯವಾಗಿದೆ. ಅದರಲ್ಲೂ ಸಿಎಂ ಸಿದ್ದರಾಮಯ್ಯ ಅವರ ಪಾಲಿಗೆ ಎರಡು ಕ್ಷೇತ್ರಗಳ ಉಪ ಚುನಾವಣೆಯನ್ನು ಗೆದ್ದರೆ ಮತ್ತಷ್ಟು ಬಲ ಹೆಚ್ಚುವುದಂತೂ ಸ್ಪಷ್ಟ.

ಹಾಗಾಗಿ ಸಿದ್ದರಾಮಯ್ಯ ಅವರು ಎರಡೂ ಕ್ಷೇತ್ರಗಳಲ್ಲಿ ಬಿರುಸಿನ ಪ್ರಚಾರ ನಡೆಸುತ್ತಿದ್ದಾರೆ. ಪ್ರಸ್ತುತ ವಿಷಯಗಳನ್ನು ಇಟ್ಟುಕೊಂಡು ಎರಡೂ ಪಕ್ಷದವರು ಅಬ್ಬರದ ಪ್ರಚಾರ ನಡೆಸುತ್ತಿದ್ದಾರೆ. ಉಪ ಚುನಾವಣೆಯಲ್ಲಿ ಹಿನ್ನೆಲೆ ಹಾಲಿ ಹಾಗೂ ಮಾಜಿ ಸಿಎಂ ಸೇರಿದಂತೆ ಘಟಾನುಘಟಿಗಳು ಆಗಮಿಸಿ ಕ್ಷೇತ್ರದಾದ್ಯಂತ ಸಂಚಾರ ಮಾಡಿ, ಮತ ಯಾಚಿಸುತ್ತಿದ್ದಾರೆ. ಜೊತೆಗೆ ಜಾತಿ, ಅನುಕಂಪ, ಅಭಿವೃದ್ಧಿ ಹಾಗೂ ಇತರ ವಿಷಯಗಳನ್ನಿಟ್ಟುಕೊಂಡು ಪ್ರಚಾರ ತಂತ್ರ ಮಾಡುತ್ತಿದ್ದಾರೆ.

ಎರಡೂ ಕ್ಷೇತ್ರವನ್ನು ತನ್ನ ಬಳಿಯಲ್ಲೇ ಉಳಿಸಿಕೊಳ್ಳಲು ಆಡಳಿತಾರೂಢ ಕಾಂಗ್ರೆಸ್ ಪಕ್ಷ ಪಣ ತೊಟ್ಟಿದೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಎಐಸಿಸಿ ಮಾರ್ಗದರ್ಶನದಂತೆ ಅಭ್ಯರ್ಥಿಗಳ ಆಯ್ಕೆ ಮತ್ತು ಗೆಲುವಿನ ರಣತಂತ್ರ ರೂಪಿಸಲು ಸಚಿವರನ್ನು ಒಳಗೊಂಡ ಪ್ರಬಲ ಉಸ್ತುವಾರಿ ಸಮಿತಿಗಳನ್ನು ರಚಿಸಿ ಅಖಾಡಕ್ಕೆ ಇಳಿದಿದ್ದಾರೆ.ಬಾಗಲಕೋಟೆಯಲ್ಲಿ ಕುರುಬ, ಲಿಂಗಾಯತ ಮತ್ತು ಪರಿಶಿಷ್ಟ ಜಾತಿಯ ಮತಗಳು ನಿರ್ಣಾಯಕವಾಗಿದ್ದು, ಇಲ್ಲಿಗೆ 15 ಸದಸ್ಯರ ಉಸ್ತುವಾರಿ ಸಮಿತಿಯನ್ನು ಕಾಂಗ್ರೆಸ್ ನೇಮಿಸಿದೆ.

ಈ ಸಮಿತಿಯಲ್ಲಿ ಎಂಟು ಮಂದಿ ಪ್ರಭಾವಿ ಸಚಿವರಿದ್ದು, ಆರ್.ಬಿ.ತಿಮಾಪುರ, ಎಂ.ಬಿ. ಪಾಟೀಲ ಮತ್ತು ಸತೀಶ ಜಾರಕಿಹೊಳಿ ಅವರಿಗೆ ಸ್ಥಾನ ನೀಡಿರುವುದು, ಕ್ಷೇತ್ರದಲ್ಲಿ ಪ್ರಾಬಲ್ಯ ಹೊಂದಿರುವ ಸಮುದಾಯಗಳನ್ನು ಸೆಳೆಯುವ ತಂತ್ರವೆಂದೇ ವಿಶ್ಲೇಷಿಸಲಾಗಿದೆ.

ಎಲ್.ಐ.ಸಿ. ವಿಮಾ ನೌಕರರ ಸಂಘದಿಂದ ನೀರಿ ಅರವಟಿಗೆ ಪ್ರಾರಂಭ



ರಾಯಚೂರು,ಏ.6-

ನಗರದ ಭಾರತೀಯ ಜೀವ ವಿಮಾ ನಿಗಮದ ಕಛೇರಿಯ ಮುಖ್ಯ ಧ್ವಾರದಲ್ಲಿ ವಿಮಾ ನೌಕರರ ಸಂಘದ ಪ್ರದಾನ ಕಾರ್ಯದರ್ಶಿ ಎಂ. ರವಿಯವರ, ಸರ್ವ ಪದಾಧಿಕಾರಿಗಳ ನೇತೃತ್ವ ಹಾಗೂ ವಿಭಾಗದ ಮುಖ್ಯಸ್ಥರಾದ ಪ್ರಸಾದ ಬಸವರಾಜ ಹಿರಿಯ ವಿಭಾಗಾಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನೀರಿನ ಅರವಾಟಿಗೆಯನ್ನು ಪ್ರಾರಂಭಿಸಲಾಯಿತು.

ಪ್ರಾರಂಭದಲ್ಲಿ ಸಾರ್ವಜನಿಕರಿಗೆ ತಂಪಾದ ಮಜ್ಜಿಗೆ ವಿತರಿಸುವ ಮೂಲಕ ಉದ್ಘಾಡಿಸಿದ ಪ್ರಸಾದ ಬಸವರಾಜರವರು ಮಾಧ್ಯಮದವರೊಂದಿಗೆ ಮಾತನಾಡಿ ಕಳೆದ 25 ವರ್ಷಗಳಿಂದಲೂ ಈ ಸಂಘವು ಶುದ್ಧ ಕುಡಿಯುವ ನೀರಿನ ಅರವಟಿಗೆಯ ಸೇವೆಯನ್ನು

3ನೇ ಪುಟಕ್ಕೆ

ಸಿರವಾರ ಠಾಣೆ ಪಿಎಸ್ ಐ ಚಂದ್ರಶೇಖರ ಹಿರೇಮಠ ಅಧಿಕಾರಿ ಸ್ವೀಕಾರ

ಸಿರವಾರ.ಏ.6-

ಸುಮಾರು ಮೂರು ತಿಂಗಳಿಂದ ಖಾಲಿಯಲ್ಲಿದ್ದ ಸಿರವಾರ ಪೊಲೀಸ್ ಠಾಣೆಗೆ ಕೊನೆಗೂ ಪಿಎಸ್ ಐ ನೇಮಕವಾಗಿದ್ದೂ, ಚಂದ್ರಶೇಖರ ಹಿರೇಮಠ ಅವರು ಸೊಮವಾರ ಅದಿಕಾರಿ ಸ್ವೀಕರಿಸಿದರು. ಈ ಹಿಂದೆ ಪಿಎಸ್ ಐ ಆಗಿದ ವೆಂಕಟೇಶ ನಾಯಕ ಅವರ ವರ್ಗಾವಣೆಯಿಂದ ಮೂರು ತಿಂಗಳಿಂದ ಪಿಎಸ್ ಐ ಹುದ್ದೆ ಖಾಲಿ ಇತ್ತು. ಆ ಸ್ಥಾನಕ್ಕೆ ಸಿಂಧನೂರು ಟ್ರಾಫಿಕ್ ಪಿಎಸ್ ಐ ಆಗಿದ್ದ ಚಂದ್ರಶೇಖರ ಹಿರೇಮಠ ಅವರನ್ನು ಸಿರವಾರ ಠಾಣೆಗೆ ಸ್ಥಳ ನಿಯೋಜನೆ ಮಾಡಲಾಗಿತು. ಅದರನ್ವಯ ಸೋಮವಾರ ಅದಿಕಾರ ಸ್ವಿಕರಿಸಿದರು. ನಂತರ



ಪತ್ರಿಕೆಯೊಂದಿಗೆ ಮಾತನಾಡಿದ ಅವರು ನಾನು ರಾಯಚೂರು ಜಿಲ್ಲೆ ಹಾಲಾಪೂರು ಗ್ರಾಮದವರಾಗಿರುವ ಕಾರಣ ಸಿರವಾರ ನನಗೆ ಪತಿಚತವಿದೆ. ಠಾಣೆಯ ವ್ಯಾಪ್ತಿಯು ದೊಡ್ಡದಿದೆ. ಇರುವ ಸಿಬ್ಬಂದಿಯನ್ನು ಬಳಕೆ ಮಾಡಿಕೊಂಡು ಉತ್ತಮ ಸೇವೆ ನೀಡುವೆ ಎಂದರು.

ಏ.07ರಂದು ''ಶಾಂತರಸ ನೆನಪು'' ಕಾರ್ಯಕ್ರಮ

ರಾಯಚೂರು,ಏ.06-

ರಂಗಸಿರಿ ಸಾಂಸ್ಕೃತಿಕ ಕಲಾ ಬಳಗ ರಾಯಚೂರು, ಸಂಸ ಥಿಯೇಟರ್ ಬೆಂಗಳೂರು ಹಾಗೂ ನವಯುಗ ಪದವಿ ಮಹಾವಿದ್ಯಾಲಯ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ''ಶಾಂತರಸ ನೆನಪು'' ಕಾರ್ಯಕ್ರಮವನ್ನು ಏಪ್ರಿಲ್ 7ರಂದು ಬೆಳಿಗ್ಗೆ 9.30ಕ್ಕೆ ನಗರದ ನವಯುಗ ಪದವಿ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ ಎಂದು ರಂಗಸಿರಿ ಸಾಂಸ್ಕೃತಿಕ ಕಲಾ ಬಳಗದ ಅಧ್ಯಕ್ಷ ರಂಗಸ್ವಾಮಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮವನ್ನು ಹೋರಾಟಗಾರರಾದ ಡಾ. ಬಸವರಾಜ ಕಳಸ ಉದ್ಘಾಟಿಸಲಿದ್ದು, ನವಯುಗ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಆಂಜನೇಯ ಪೂಜಾರಿ ಅಧ್ಯಕ್ಷತೆ



ವಹಿಸಲಿದ್ದಾರೆ.

ಹಿರಿಯ ಸಾಹಿತಿ ಬಾಬು ಪಂಡಾಲಗಲ್ ಉಪನ್ಯಾಸ ನೀಡಲಿದ್ದು, ಮುಖ್ಯ ಅತಿಥಿಗಳಾಗಿ ಅಕಾಡೆಮಿ ಆಫ್ ಮೆಡಿಕಲ್‌ನ ಕೋಶಾಧ್ಯಕ್ಷ ಭಾಮನಗೌಡ ಇಟಗಿ, ಸಾಹಿತಿ ಶ್ರೀಮತಿ ರಾಜಶ್ರೀ ಕಲ್ಲೂರಕರ ಹಾಗೂ ಆಕಾಶವಾಣಿ ರಾಯಚೂರು ಕಾರ್ಯಕ್ರಮ ಮುಖ್ಯಸ್ಥ ವೆಂಕಟೇಶ್ ಬೇವಿನಬೆಂಜ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಮಹಾದೇವ್ ಪಾಟೀಲ್, ಯಲ್ಲಪ್ಪ ಮರ್ಚೆಡ್, ಮಲ್ಲೇಶ್ ಭೈರವ, ಅಭಿಷೇಕ್ ಐಲಿ ಮಸರಕಲ್ ಹಾಗೂ ನರಸಿಂಹಲು ವಡವಾಟ ಅವರು ಗಜಲ್ ವಾಚನ ನಡೆಸಲಿದ್ದಾರೆ. ಕಾರ್ಯಕ್ರಮದ ನಿರೂಪಣೆಯನ್ನು ವೆಂಕಟ ನರಸಿಂಹರು ಮಾಡಲಿದ್ದು, ನವಯುಗ ಪದವಿ

3ನೇ ಪುಟಕ್ಕೆ

ಮಾನವಿ: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ತಾತ್ಕಾಲಿಕ ಪಟ್ಟಿ ಪ್ರಕಟ; ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ

ರಾಯಚೂರು ಏಪ್ರಿಲ್ 06

ರಾಯಚೂರು ಜಿಲ್ಲೆಯ ಮಾನವಿ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ 06 ಅಂಗನವಾಡಿ ಕಾರ್ಯಕರ್ತೆ ಮತ್ತು 44 ಸಹಾಯಕಿಯರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಈಗಾಗಲೇ ಅರ್ಜಿಗಳನ್ನು ಅಹ್ವಾನಿಸಲಾಗಿತ್ತು. ಆದರಂತೆ ಈ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕವಾಗಿ ಆಯ್ಕೆ ಮಾಡಿರುವದರಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಕ್ಷೇಪಣೆಗಳು ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಏಪ್ರಿಲ್ 13ರೊಳಗೆ ಸಲ್ಲಿಸಬಹುದಾಗಿದೆ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಆಯ್ಕೆ ಸಮಿತಿ ಇವರಿಂದ ಅನುಮೋದನೆಗೊಂಡ ತಾತ್ಕಾಲಿಕ ಪಟ್ಟಿ ಪ್ರಕಟಿಸಲಾಗಿದ್ದು, ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು 07 ದಿನ ಕೆಲಸದ ದಿನಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮಾತ್ರ ಖುದ್ದಾಗಿ ಕಚೇರಿಗೆ ಬಂದು ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ಆಕ್ಷೇಪಣೆ ಸಲ್ಲಿಸುವವರು ನಿಖರವಾದ ದಾಖಲಾತಿಯೊಂದಿಗೆಆಕ್ಷೇಪಣೆ ಸಲ್ಲಿಸತಕ್ಕದ್ದು. ದಾಖಲೆ ಇಲ್ಲದಿದ್ದಲ್ಲಿ ಅಂತಹ ಆಕ್ಷೇಪಣೆಗಳನ್ನು ಪರಿಗಣನೆಗೆ ತೆಗೆದುಕೊಳ್ಳುವುದಿಲ್ಲ ಎಂದು ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಷಪೂರಿತ ಸೇಂದಿ ಮಾರಾಟ: ಆರೋಪಿ ಬಂಧನ

ರಾಯಚೂರು,ಏ.06-

ಸಾರ್ವಜನಿಕರ ಆರೋಗ್ಯಕ್ಕೆ ಅಪಾಯಕಾರಿಯಾಗುವ ವಿಷಪೂರಿತ ಸೇಂದಿ ಮಾರಾಟ ಮಾಡುತ್ತಿದ್ದ ವ್ಯಕ್ತಿಯನ್ನು ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆ ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ದಿನಾಂಕ 05.04.2026 ರಂದು ಬೆಳಿಗ್ಗೆ ಸುಮಾರು 8 ಗಂಟೆಯ ವೇಳೆ ಪೆಟ್ರೋಲಿಂಗ್ ವೇಳೆ ಗದ್ವಾಲ್ ರಸ್ತೆಯ ಪಾಪರೆಡ್ಡಿ ಮಿಲ್ ಸಮೀಪ ಖಚಿತ ಮಾಹಿತಿ ದೊರೆತ ಹಿನ್ನೆಲೆ ಪೊಲೀಸರು ದಾಳಿ ನಡೆಸಿದರು. ಈ ವೇಳೆ ಕೆಂಚಪ್ಪ (40), ನವಾಬಗಡ್ಡ ನಿವಾಸಿ, ಕಾರ್ಪೆಂಟರ್ ಕೆಲಸ ಮಾಡುತ್ತಿದ್ದ ವ್ಯಕ್ತಿ ಸಾರ್ವಜನಿಕ ಸ್ಥಳದಲ್ಲಿ ಅನಧಿಕೃತವಾಗಿ ಸಿ.ಎಚ್ ಪೌಡರ್ ಮಿಶ್ರಿತ, ಮಾನವ



ಸೇವನೆಗೆ ಯೋಗ್ಯವಲ್ಲದ ಹಾಗೂ ಜೀವಕ್ಕೆ ಅಪಾಯಕಾರಿಯಾದ ಸೇಂದಿಯನ್ನು ಮಾರಾಟ ಮಾಡುತ್ತಿರುವುದು ಪತ್ತೆಯಾಯಿತು.

ತಕ್ಷಣವೇ ಆರೋಪಿಯನ್ನು ಬಂಧಿಸಿದ ಪೊಲೀಸರು, ಪ್ರಕರಣ ದಾಖಲಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ. ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ 30/2026ರಂತೆ ಬಿ.ಎನ್.ಎಸ್ 2023ರ ಕಲಂ 275, 286, 123 ಹಾಗೂ ಕೆ.ಇ ಕಾಯ್ದೆ 32, 34ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಬಂಧಿತ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಿಳಿಸಿದರು.

ಪುರಸಭೆ ವ್ಯಾಪ್ತಿಯ ಜನಸ್ಪಂದನ ಸಭೆ : ಕರೆಮ್ಮ ಜಿ.ನಾಯಕ

ದೇವದುರ್ಗ,ಏ.05-



ಸ್ಥಳೀಯ ಪುರಸಭೆ ವ್ಯಾಪ್ತಿಯಲ್ಲಿ ಕುಂದು-ಕೊರತೆಗಳ ಬಗ್ಗೆ ಚರ್ಚಿಸಲು ಏ. 7 ರಂದು ಜನಸ್ಪಂದನ ಸಭೆ ಆಯೋಜಿಸಲಾಗಿದೆ ಎಂದು ಶಾಸಕಿ ಕರೆಮ್ಮ ಜಿ.ನಾಯಕ ತಿಳಿಸಿದರು.

ಪಟ್ಟಣದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿ, ಪುರಸಭೆಯಲ್ಲಿ ಆಡಳಿತ ಮಂಡಳಿ ಅವಧಿ ಮುಗಿದಿದ್ದು, ಸಾರ್ವಜನಿಕರು ತಮ್ಮ ಕೆಲಸಗಳು ಆಗುತ್ತಿಲ್ಲ ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯಗಳು ಸೂಕ್ತ ಸಮಯಕ್ಕೆ ದೊರಕುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ.

ಕಾರಣ ಪುರಸಭೆ ಆವರಣದಲ್ಲಿ ಏ. 7 ರಂದು ಮುಂಜಾನೆ 10:30ಕ್ಕೆ ಜನಸ್ಪಂದನ ಸಭೆಯನ್ನು ಜರುಗಿಸಕಾಗುವುದು. ಪುರಸಭೆ ವ್ಯಾಪ್ತಿಯ 23 ವಾರ್ಡುಗಳ ನಾಗರಿಕರು ಈ ಸಭೆಯ ಪ್ರಯೋಜನ ಪಡೆದುಕೊಳ್ಳಬೇಕೆಂದು ಶಾಸಕಿ ಕರೆಮ್ಮ ಜಿ.ನಾಯಕ ತಿಳಿಸಿದ್ದಾರೆ.

ಹೂಗಾರ ಸಮಾಜ ಸಂಘ ತಾಲೂಕ ಘಟಕ ಮಸ್ಕಿ ಶ್ರೀ ಶರಣ ಹೂಗಾರ ಮಾದಯ್ಯನವರ ಅದ್ದೂರಿ ಜಯಂತ್ಯೋತ್ಸವ



ಮಸ್ಕಿ, ಏ.6-

ಶ್ರೀ ಶಿವಶರಣ ಹೂಗಾರ ಮಾದಯ್ಯನವರ ಮೃತ ಉದ್ಘಾಟನಾ ಕಾರ್ಯಕ್ರಮಕ್ಕೆ ಶ್ರೀ ಶ್ರೀ ವರ ರುದ್ರಮುನಿ ಶಿವಾಚಾರ್ಯ ಮಹಾ ಸ್ವಾಮಿಗಳು ಶ್ರೀ ಶ್ರೀ ಕೇಂದ್ರ ಮಹಾ ಸ್ವಾಮಿಗಳು ಸುಕ್ಷೇತ್ರ ಉಟಕನೂರ ಪೂಜರು ಇವರ ಅಮೃತಸ್ಥದಿಂದ ಕಾರ್ಯಕ್ರಮದ ಉದ್ಘಾಟನೆ ಚಾಲನೆ ನೀಡಲಾಯಿತು..

ದಿವ್ಯ ಸಾನಿಧ್ಯವನ್ನು ವರ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿಕೊಂಡಿದ್ದರು ಬಸಣ್ಣ ಹೂಗಾರ್ ಗೌರವ ಅಧ್ಯಕ್ಷರು ವೀರೇಶ್ ಉಗಾರ್ ಬಸಾಪುರ ಅಧ್ಯಕ್ಷರು ಬಸವರಾಜ್ ಉಪಾಧ್ಯಕ್ಷರು ಶಶಿಧರ್ ಹೂಗಾರ್ ರಾಯಚೂರು ಗ್ರಾಮೀಣ ಹೂಗಾರ ಸಮಾಜದ ಅಧ್ಯಕ್ಷರು ಮಲ್ಲಪ್ಪ ಹೂಗಾರ್ ಮುದುಗಲ್ ಅಧ್ಯಕ್ಷರು ಲಿಂಗಸೂರ್ ತಾಲ್ಲೂಕು ಸಮಾಜ ಭೀಮಣ್ಣ ಹೂಗಾರ್ ಅಧ್ಯಕ್ಷರು ಸಿಂಧನೂರು ತಾಲೂಕು ಹೂಗಾರ ಸಮಾಜ ಶಂಕರ್ ಹೂಗಾರ್ ಅಧ್ಯಕ್ಷರು ದೇವ ದುರ್ಗ ತಾಲೂಕು ಹೂಗಾರ್

3ನೇ ಪುಟಕ್ಕೆ

ಜಕ್ಕಲದಿನ್ನಿ, ಬಿಜೆಪಿ ಸಂಸ್ಥಾಪನ ದಿನಾಚರಣೆ

ಸಿರವಾರ ಏ.6-

ತಾಲೂಕಿನ ಸಮೀಪದ ಜಕ್ಕಲದಿನ್ನಿ ಗ್ರಾಮದಲ್ಲಿ ಬಿಜೆಪಿ ಸಂಸ್ಥಾಪನ ದಿನಾಚರಣೆಯನ್ನು ಅತ್ಯಂತ ಸಂಭ್ರಮದಿಂದ ಆಚರಣೆ ಮಾಡಿದರು

ಜಕ್ಕಲದಿನ್ನಿ ಗ್ರಾಮದ ಬೂತ್ ನಂಬರ್ 39 ಹಾಗೂ 40ರ ಅಧ್ಯಕ್ಷರಾದ ಮಹಾತೇಶ ಮಡಿವಾಳ ಜಯರಾಜ ಮರಕಂದಿನ್ನಿ ಅವರ ಉಪಸ್ಥಿತಿಯಲ್ಲಿ ಶಿವರಾಜ್ ನಾಯಕ ಅವರ ಮನೆ ಮೇಲೆ ಬಿಜೆಪಿ ಸಂಸ್ಥಾಪನ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸಲಾಯಿತು

ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ್ ಜಕ್ಕಲದಿನ್ನಿ ಮಾತನಾಡಿ ನಮ್ಮ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಮತ್ತು ಜಿಲ್ಲೆಯ ಜನರ ಸೇವೆಗಾಗಿ ಪಕ್ಷದ ಸಿದ್ಧಾಂತದ



ಅಡಿಯಲ್ಲಿ ನಾವು ಸದಾ ಕಟಿಬದ್ಧರಾಗಿದ್ದೇವೆ ಮತ್ತು ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರ ವಿಕಾಸಿತ ಭಾರತದ ಕನಸನ್ನು ನನಸಾಗಿಸಲು ನಮ್ಮ ಪಕ್ಷದ ಸಂಸ್ಥಾಪಕರು ಹಾಕಿಕೊಟ್ಟ ದಾರಿಯಲ್ಲಿ ಮುನ್ನಡೆಯೋಣ

ಜೊತೆಗೆ ಬಿಜೆಪಿ ಪಕ್ಷ ನಡೆದು ಬಂದ ಹಾದಿಯಲ್ಲಿ ಪಕ್ಷಕ್ಕೆ ಅನೇಕ ಹಿರಿಯರು ಮುತ್ಸದ್ದಿಗಳು ತಮ್ಮ ಜೀವನವನ್ನು ತ್ಯಾಗ ಮಾಡಿದ ಶ್ಯಾಮ ಪ್ರಕಾಶ್ ಮುಖರ್ಜಿ ಹಾಗೂ ದೀನ ದಯಾಳ್ ಉಪಾಧ್ಯಾಯರು ಅಂತ ಮಹನೀಯರ ಹಾಕಿಕೊಟ್ಟಂತ

3ನೇ ಪುಟಕ್ಕೆ

ದೇಶಕ್ಕೆ ಆಹಾರ ಭದ್ರತೆ, ಕೃಷಿ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆಯಲ್ಲಿ ಡಾ.ಬಾಬು ಜಗಜೀವನರಾಮ್ ಅವರ ಪಾತ್ರ ಅವಿಸ್ಮರಣೀಯ-ಮೇಯರ್ ಪಿ.ಗಾದೆಪ್ಪ





ಬಳ್ಳಾರಿ,ಏ.06-

ದೇಶಕ್ಕೆ ಆಹಾರ ಭದ್ರತೆ ಒದಗಿಸುವಲ್ಲಿ ಮತ್ತು ಕೃಷಿ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತರುವಲ್ಲಿ ಡಾ.ಬಾಬು ಜಗಜೀವನರಾಮ್ ಅವರ ಪಾತ್ರ ಅವಿಸ್ಮರಣೀಯ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದಲ್ಲಿ ಭಾನುವಾರ ಏರ್ಪಡಿಸಿದ್ದ ಭಾರತದ ಮಾಜಿ ಉಪ ಪ್ರಧಾನಮಂತ್ರಿ ಹಾಗೂ ಹಸಿರು ಕ್ರಾಂತಿ ಹರಿಕಾರರಾದ ಡಾ.ಬಾಬು ಜಗಜೀವನರಾವ್ ಅವರು 119ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶವು ಇಂದು ಆಹಾರ ಭದ್ರತೆಯಲ್ಲಿ ಸ್ವಾವಲಂಬನೆ ಸಾಧಿಸಲು ಅಂದಿನ ದಿನಗಳಲ್ಲಿ ದೇಶದ ಧೀಮಂತ ನಾಯಕ,

ಮಾಜಿ ಉಪಪ್ರಧಾನಿ ಹಾಗೂ ಭಾರತದ ಹಸಿರು ಕ್ರಾಂತಿಯ ಮೂಲ ಪುರುಷ ಡಾ.ಬಾಬು ಜಗಜೀವನರಾವ್ ಅವರು ಹಾಕಿಕೊಟ್ಟ ಭದ್ರ ಬುನಾದಿಯೇ ಕಾರಣ ಎಂದು ಸ್ಮರಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಭಾರತವು ಆಹಾರಕ್ಕಾಗಿ ಅಮೆರಿಕದ ಮೇಲೆ ಅವಲಂಬಿತವಾಗಿದ್ದ ಕಾಲದಲ್ಲಿ, ಕೃಷಿ ಸಚಿವರಾಗಿ ಬಾಬೂಜಿಯವರು ತಂದ ಹೊಸ ತಂತ್ರಜ್ಞಾನ ಮತ್ತು ಹಸಿರು ಕ್ರಾಂತಿ ದೇಶಕ್ಕೆ ಆಹಾರ ಸ್ವಾವಲಂಬನೆಯನ್ನು ತಂದುಕೊಟ್ಟಿತು. ಅಂದಿನಿದ ಇಂದಿನವರೆಗೆ ದೇಶದಲ್ಲಿ ಆಹಾರ ಉತ್ಪಾದನೆಯ ಕೊರತೆಯಾಗಿಲ್ಲ ಎಂಬುದು ಗಮನಾರ್ಹವಾಗಿದೆ ಎಂದು ಹೇಳಿದರು.

ಡಾ.ಬಾಬು ಜಗಜೀವನರಾವ್ ಅವರ ಜೀವನಶೈಲಿಯು ಇಂದಿನ ಸುಸ್ಥಿರ ಅಭಿವೃದ್ಧಿ' ಕಲ್ಪನೆಗೆ ಮಾದರಿಯಾಗಿದೆ. ಸತ್ಯ, ಪ್ರಾಮಾಣಿಕತೆ ಮತ್ತು ಸಮಾನತೆಯ ಬಗ್ಗೆ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಸಾಗಬೇಕಿದೆ ಎಂದು ಕರೆ ನೀಡಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ದೇಶದ ಇಬ್ಬರು ಮಹಾನ್ ನಾಯಕರಾದ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬು ಜಗಜೀವನ್ ರಾಮ್ ಅವರನ್ನು ಭಾರತದ ಎರಡು ಕಣ್ಣುಗಳಿದ್ದಂತೆ, ಅವರ ದಾರಿಯಲ್ಲಿ ನಡೆಯುವುದು ಇಂದಿನ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಬಾಬು ಜಗಜೀವನ್ ರಾಮ್ ಅವರು ವಿದ್ಯಾರ್ಥಿಯಾಗಿದ್ದಾಗ ಗಣಿತ ವಿಷಯದಲ್ಲಿ 100ಕ್ಕೆ 100 ಅಂಕಗಳನ್ನು ಪಡೆಯುವ ಮೂಲಕ ಶ್ರದ್ದೆಯಿಂದ ವ್ಯಾಸಂಗ ಮಾಡುತ್ತಿದ್ದರು. ಅವರ ಈ ಪ್ರತಿಭೆ ಮತ್ತು ಪರಿಶ್ರಮ ಇಂದಿನ ವಿದ್ಯಾರ್ಥಿಗಳಿಗೆ ದೊಡ್ಡ ಮಾದರಿಯಾಗಬೇಕು ಎಂದರು.

ಮೈಸೂರು ವಿಶ್ವವಿದ್ಯಾಲಯದ ಮಾನಸ ಗಂಗೋತ್ರಿಯ ಡಾ.ಬಾಬು ಜಗಜೀವನರಾವ್ ಅಧ್ಯಯನ ಕೇಂದ್ರದ ಸಂಶೋಧನಾಧಿಕಾರಿ ಡಾ.ಶ್ರೀನಿವಾಸಮೂರ್ತಿ ಎಂ. ಅವರು ವಿಶೇಷ ಉಪನ್ಯಾಸಕರಾಗಿ ಭಾಗವಹಿಸಿ ಮಾತನಾಡಿ, ಡಾ.ಬಾಬು ಜಗಜೀವನ್ ರಾಮ್ ಅವರು ಡಾ.ಬಿ.ಆರ್. ಅಂಬೇಡ್ಕರ್ ಅವರೊಂದಿಗೆ ಸಂವಿಧಾನ ರಚನಾ ಸಮಿತಿಯಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸಿದ್ದರು. ಬಾಬು ಜಗಜೀವನ್ ರಾಮ್ ಅವರು ಯುದ್ದದಿಂದ ಆಗುವ ಅನಾಹುತಗಳ ಬಗ್ಗೆ ದೂರದೃಷ್ಟಿಯನ್ನು ಹೊಂದಿದ್ದರು ಎಂದು ತಿಳಿಸಿದರು.

ಬಾಬು ಜಗಜೀವನ್ ರಾಮ್ ಅವರು ತಮ್ಮ 50 ವರ್ಷಗಳ ಸುದೀರ್ಘ ರಾಜಕೀಯ ಜೀವನದಲ್ಲಿ ಒಂದೇ ಒಂದು ಚುನಾವಣೆಯಲ್ಲೂ ಸೋಲನ್ನು ಕಾಣದ ಏಕೈಕ ಮಹಾನ್ ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಸುದೀರ್ಘ ರಾಜಕೀಯ ಪಯಣ ಮತ್ತು ದೇಶಕ್ಕೆ ಅವರು ನೀಡಿದ ಕೊಡುಗೆಗಳು ಅಪಾರ ಎಂದು ಸ್ಮರಿಸಿದರು.

ಲೋಕಸಭೆಯಲ್ಲಿ ದಲಿತ ಸಮುದಾಯವನ್ನು ಸಮರ್ಥವಾಗಿ ಪ್ರತಿನಿಧಿಸಿದ ಅವರು, ದೇಶದ ರಾಜಕಾರಣದಲ್ಲಿ ದಲಿತರಿಗೆ ಸಿಗಬೇಕಾದ ಹಕ್ಕನ್ನು ಕೊಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಬಾಬುಜಿಯವರ ವ್ಯಕ್ತಿತ್ವವನ್ನು ಬೇರೆ ಯಾರೊಂದಿಗೂ ಹೋಲಿಸಬಾರದು; ಅವರೊಬ್ಬ ಅಪ್ರತಿಮ ವಿಶ್ವ ನಾಯಕ ಎಂದು ಬಣ್ಣಿಸಿದರು.

1971 ರ ಯುದ್ದದ ಸಮಯದಲ್ಲಿ ಅವರು ರಕ್ಷಣಾ ಸಚಿವರಾಗಿ ತೆಗೆದುಕೊಂಡ ನಿರ್ಧಾರಗಳು ಭಾರತದ ಸಾರ್ವಭೌಮತ್ವವನ್ನು ಎತ್ತಿ ಹಿಡಿದವು. ಇಂದಿರಾ ಗಾಂಧಿಯವರನ್ನು ಪ್ರಧಾನಮಂತ್ರಿಯಾಗಿ ಮಾಡುವಲ್ಲಿ ಮತ್ತು ಆ ಕಾಲದ ರಾಜಕೀಯ ಬಿಕ್ಕಟ್ಟುಗಳನ್ನು ನಿಭಾಯಿಸುವಲ್ಲಿ ಅವರ ಪಾತ್ರ ಅತ್ಯಂತ ದೊಡ್ಡದಾಗಿತ್ತು ಎಂದು ತಿಳಿಸಿದರು.

ಬಿಹಾರದ ಚಾಂದ್ವಾ ಗ್ರಾಮದ ಸಾಮಾನ್ಯ ಕುಟುಂಬದಲ್ಲಿ ಜನಿಸಿದ ಡಾ.ಬಾಬು ಜಗಜೀವನ್ ರಾಮ್ ಅವರು ಅವರು, ತಂದೆ ಶೋಭಿ ರಾಮ್ ಮತ್ತು ತಾಯಿ ವಾಸಂತಿ ದೇವಿ ಅವರ ಮಾರ್ಗದರ್ಶನದಲ್ಲಿ ಬೆಳೆದು, ಸಂತ ರವಿದಾಸರ ಮತ್ತು ಸಂತ ಶಿವನಾರಾಯಣ ಪಂಥದ ಪ್ರಭಾವದಿಂದ ಸಾತ್ವಿಕ ಗುಣ ಮತ್ತು ಸಜ್ಜನಿಕೆಯನ್ನು ತಮ್ಮ ಜೀವನದುದ್ದಕ್ಕೂ ಪಾಲಿಸಿಕೊಂಡು ಬಂದಿದ್ದರು ಎಂದು ವಿವರಿಸಿದರು.

ಕಾರ್ಯಕ್ರಮ ಆರಂಭಕ್ಕೂ ಮುನ್ನ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಅವರು ಸಂವಿಧಾನ ಪ್ರಸ್ತಾವನೆ ಬೋಧಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಡಾ.ಬಾಬು ಜಗಜೀವನರಾಮ್ ಜನಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಪಂಪಾಪತಿ, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್ ಮಂಜುನಾಥ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ನವೀನ್ ಕುಮಾರ್ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು, ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು, ಸಂಘ- ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಸತಿ ನಿಲಯದ ವಿದ್ಯಾರ್ಥಿ- ವಿದ್ಯಾರ್ಥಿನಿಯರು, ಸಾರ್ವಜನಿಕರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಎಸ್ಎಸ್ಎಲ್ಸಿ ಮತ್ತು ಪಿಯುಸಿ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಪಡೆದ ಸಮುದಾಯದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಜಯಂತಿಯ ಅಂಗವಾಗಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಸಂಭ್ರಮದ ಮೆರವಣಿಗೆ:

ಡಾ.ಬಾಬು ಜಗಜೀವನ್ ರಾಮ್ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಗೆ ಡಾ.ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಚಾಲನೆ ನೀಡಲಾಯಿತು. ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾ ತಂಡಗಳು ಭಾಗವಹಿಸಿ ಮೆರಗು ನೀಡಿದವು.

ಮೆರವಣಿಗೆಗೆ ಮುನ್ನ ನಗರದ ನಲ್ಲಚೇರುವು ಪ್ರದೇಶದ ಡಾ.ಬಾಬು ಜಗಜೀವನ್ ರಾಮ್ ಅವರ ಪುತ್ಥಳಿಗೆ ಗಣ್ಯರು ಮಾಲಾರ್ಪಣೆ ಮಾಡಿದರು.

ಆಕರ್ಷಕ ಸ್ತಬ್ಧಚಿತ್ರ:

ಮೆರವಣಿಗೆಯಲ್ಲಿ ಸಾರಿಗೆ ಇಲಾಖೆ ವತಿಯಿಂದ ರೂಪಿಸಿದ್ದ ವಿಧಾನಸೌಧ ಸ್ತಬ್ಧಚಿತ್ರ, ಕೃಷಿ ಇಲಾಖೆ, ತೋಟಗಾರಿಕೆ, ರೇಷ್ಮೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ವತಿಯಿಂದ ವಿವಿಧ ಸರ್ಕಾರದ ಕಾರ್ಯಕ್ರಮಗಳು ಮತ್ತು ವಿವಿಧ ಯೋಜನೆಗಳ ಮಾಹಿತಿ ಕುರಿತ ಸ್ತಬ್ಧಚಿತ್ರಗಳು ಗಮನ ಸೆಳೆದವು.

ಮೆರವಣಿಗೆಯು ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೆಯ ಬ್ರೂಸ್ ಪೇಟೆ ಪೊಲೀಸ್ ಠಾಣೆ ಮುಂಭಾಗ, ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.



ಎಲ್‌ಪಿಜಿ ಸಿಲಿಂಡರ್‌ಗಳ ತೀವ್ರ ಕೊರತೆ : ಕೆಕೆಸಿಸಿಐ ಕಳವಳ

ಕಲಬುರಗಿ,ಏ.06-

ಮಧ್ಯ ಪ್ರಾಚ್ಯದ ಯುದ್ಧ ಪರಿಸ್ಥಿತಿಯಿಂದ ಉಂಟಾದ ಎಲ್‌ಪಿಜಿ ಸರಬರಾಜು ವ್ಯತ್ಯಯದ ಪರಿಣಾಮವಾಗಿ ನಗರದಲ್ಲಿನ ಹೋಟೆಲ್ ವಲಯ ತೀವ್ರ ಸಂಕಷ್ಟಕ್ಕೆ ಸಿಲುಕಿದೆ ಎಂದು ಕಲ್ಯಾಣ ಕರ್ನಾಟಕ ವಾಣಿಜ್ಯ ಹಾಗೂ ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ಹಾಗೂ ಹೋಟೆಲ್ ಅಸೋಸಿಯೇಶನ್ ಆತಂಕ ವ್ಯಕ್ತಪಡಿಸಿವೆ.

ಈ ಹಿನ್ನೆಲೆಯಲ್ಲಿ ಕೆಕೆಸಿಸಿಐ ಕಚೇರಿಯಲ್ಲಿ ರವಿವಾರ ಹೋಟೆಲ್ ಅಸೋಸಿಯೇಶನ್ ಜೊತೆಗೂಡಿ ಸಂಯುಕ್ತ ಸಂವಾದ ಸಭೆ ನಡೆಯಿತು. ಸಭೆಯಲ್ಲಿ ಹೋಟೆಲ್ ಮಾಲೀಕರು ಕಳೆದ ಒಂದು ತಿಂಗಳಿಗಿಂತ ಹೆಚ್ಚು ಕಾಲದಿಂದ ವಾಣಿಜ್ಯ ಎಲ್ಪಿಜಿ ಸಿಲಿಂಡರ್‌ಗಳ ತೀವ್ರ ಕೊರತೆ ಮತ್ತು ಅನಿಯಮಿತ ಸರಬರಾಜಿನ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಕಾನೂನುಬದ್ಧವಾಗಿ ನೋಂದಾಯಿತ ಹೋಟೆಲ್‌ಗಳಿಗೆ ಸರಬರಾಜು ಸಿಗದೆ ಇರುವ ಸಂದರ್ಭದಲ್ಲಿ, ನೋಂದಾಯಿಸದ ಘಟಕಗಳು ಹಾಗೂ ಬೀದಿ ವ್ಯಾಪಾರಿಗಳಿಗೆ ಸಿಲಿಂಡರ್‌ಗಳು ಲಭ್ಯವಾಗುತ್ತಿರುವುದು ಸರಬರಾಜು ವ್ಯವಸ್ಥೆಯಲ್ಲಿನ ಅನಿಯಮ ಹಾಗೂ ದುರುಪಯೋಗದ ಸೂಚನೆ ಎಂದು ಆರೋಪಿಸಿದರು. ಜೊತೆಗೆ, ವಾಣಿಜ್ಯ ಎಲ್ಪಿಜಿ ಸಿಲಿಂಡರ್‌ಗಳು ಕಳ್ಳಬಜಾರಿನಲ್ಲಿ ಹೆಚ್ಚಿದ ದರಕ್ಕೆ ಮಾರಾಟವಾಗುತ್ತಿರುವುದರಿಂದ ಪರಿಸ್ಥಿತಿ ಇನ್ನಷ್ಟು ಗಂಭೀರಗೊಂಡಿದೆ ಎಂದು ತಿಳಿಸಿದರು.

ಸರ್ಕಾರವು ಗೃಹ ಬಳಕೆ, ಶಿಕ್ಷಣ ಸಂಸ್ಥೆಗಳು ಹಾಗೂ ಆಸ್ಪತ್ರೆಗಳಿಗೆ ಆದ್ಯತೆ ನೀಡುತ್ತಿರುವುದು ಸಮಂಜಸವಾದರೂ, ಸಾವಿರಾರು ಜನರಿಗೆ ಉದ್ಯೋಗ ನೀಡುವ ಹೋಟೆಲ್, ಮೆಸ್ ಹಾಗೂ ಬೇಕರಿ ವಲಯವನ್ನು ನಿರ್ಲಕ್ಷಿಸುವುದು ಸರಿಯಲ್ಲ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಈ ಕುರಿತು ಕೆಕೆಸಿಸಿಐ ಸರ್ಕಾರವನ್ನು ಆಗ್ರಹಿಸಿ, ವಾಣಿಜ್ಯ ಎಲ್ಪಿಜಿ ಬಳಕೆದಾರರಿಗೆ ಪ್ರತ್ಯೇಕ ಕೋಟಾ ನಿಗದಿ ಮಾಡಬೇಕು, ಸರಬರಾಜು ನಿಯಮಿತವಾಗಿರಬೇಕು, ಹಂಚಿಕೆ ವ್ಯವಸ್ಥೆ ಪಾರದರ್ಶಕವಾಗಿರಬೇಕು ಹಾಗೂ ಯಾವುದೇ ನಿರ್ಬಂಧಗಳ ಬಗ್ಗೆ ಮುಂಚಿತವಾಗಿ ಮಾಹಿತಿ ನೀಡಬೇಕು ಎಂದು ಒತ್ತಾಯಿಸಿದೆ.

ನಗರದ ಆರ್ಥಿಕ ವ್ಯವಸ್ಥೆಯ ಪ್ರಮುಖ ಅಸ್ತಂಭವಾಗಿರುವ ಹೋಟೆಲ್ ವಲಯದ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.

ಸಭೆಯಲ್ಲಿ ಕೆಕೆಸಿಸಿಐ ಅಧ್ಯಕ್ಷ ಶರಣಬಸಪ್ಪ ಎಂ.ಪಪ್ಪ, ಕಾರ್ಯದರ್ಶಿ ಶಿವರಾಜ ವಿ.ಇಂಗಿನಶೆಟ್ಟಿ, ಹೋಟೆಲ್ ಅಸೋಸಿಯೇಶನ್ ಗೌರವಾಧ್ಯಕ್ಷ ರಾಜಶೇಖರ ಶೆಳ್ಳಗಿ, ಅಧ್ಯಕ್ಷ ನರಸಿಂಹ ಮೆಂಡನ್, ರಾಜ್ಯ ಉಪಾಧ್ಯಕ್ಷ ಸತ್ಯನಾಥ ಶೆಟ್ಟಿ, ಕೆಕೆಸಿಸಿಐ ಉಪಾಧ್ಯಕ್ಷ ಕೇದಾರ ರಘೋಜಿ, ವ್ಯವಸ್ಥಾಪನಾ ಸಮಿತಿ ಸದಸ್ಯರಾದ ರಾಜಶೇಖರ ದುಕಂದಾರ, ದಿನೇಶ್ ಪಾಟೀಲ್, ಜಗದೀಶ ಪಾಟೀಲ್, ವಿನಯ ಚಿಕಟವಾರ ಸಹ ಸಭೆಯಲ್ಲಿ ಉಪಸ್ಥಿತರಿದ್ದರು.

ಎನ್ನೆಸ್ಸೆಸ್ ಎಂದರೆ ನಾನು ಸೇವೆಗೆ ಸದಾಸಿದ್ಧ: ಡಾ.ಮಹೇಶಕುಮಾರ ಗಂವ್ಹಾರ



ಕಲಬುರಗಿ,ಏ.06-

ಎನ್ನೆಸ್ಸೆಸ್ ಎಂದರೆ ನಾನು ಸೇವೆಗೆ ಸದಾಸಿದ್ಧ ಎಂದರ್ಥವಾಗಿದೆ. ಶಿಬಿರದಲ್ಲಿ ಭಾಗವಹಿಸುವವರು ಸೇವೆಗೆ ಸದಾಸಿದ್ಧರಾಗಿರಬೇಕು ಎಂದು ವಿ.ಜಿ.ಮಹಿಳಾ ಮಹಾವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಮಹೇಶಕುಮಾರ ಗಂವ್ಹಾರ ಹೇಳಿದರು.

ನಗರದ ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಿಳಾ ಮಹಾವಿದ್ಯಾಲಯದ ಎನ್ನೆಸ್ಸೆಸ್ ಎ ಮತ್ತು ಬಿ ಘಟಕವು ಶನಿವಾರ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಎನ್ನೆಸ್ಸೆಸ್ ವಿಶೇಷ ವಾರ್ಷಿಕ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಎನ್ನೆಸ್ಸೆಸ್ ಪದಕ್ಕೆ ಹೊಸ ವ್ಯಾಖ್ಯಾನ ನೀಡಿದ ಅವರು ನಿಸ್ವಾರ್ಥ ಸೇವೆಗೆ ಮತ್ತೊಂದು ಹೆಸರು ಎನ್ನೆಸ್ಸೆಸ್. ವಿದ್ಯಾರ್ಥಿಗಳು ಶಿಬಿರದಲ್ಲಿ ಸಕ್ರೀಯವಾಗಿ ಭಾಗವಹಿಸಬೇಕು. ''ನಾನು ಅಲ್ಲ, ನೀನು'' ಎಂಬುದು ಎನ್ನೆಸ್ಸೆಸ್‌ನ ಧ್ಯೇಯವಾಕ್ಯ. ಶಿಬಿರವು ಕೇವಲ ಸ್ವಚ್ಛತೆ ಅಷ್ಟೇ ಅಲ್ಲ ಶಿಸ್ತು, ಸಂಯಮ, ಸಮಯಪ್ರಜ್ಞೆ, ನಾಯಕತ್ವ ಗುಣ, ರಾಷ್ಟ್ರಾಭಿಮಾನ ಮತ್ತು ಸ್ವಇಚ್ಛಾಶಕ್ತಿ, ಸೇವಾಧರಿತ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಾಗ ಮಾತ್ರ ಗಾಂಧಿಜಿಯವರ ಕನಸ್ಸು ಶಿಬಿರದ ಆಶಯ ಈಡೇರುತ್ತದೆ. ಶಿಬಿರಾರ್ಥಿಗಳು ತಮ್ಮನ್ನು ತಾವು ತೊಡಗಿಸಿಕೊಂಡು ಈ ಶಿಬಿರದ ಮೂಲಕ ಸರ್ವತೋಮುಖ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಆದರೆ ಇಂದಿನ ಯುವಜನತೆ ಜಂಕ್‌ಪುಡ್, ಫಾಸ್ಟ್‌ಫುಡ್‌ಗಳಿಗೆ ಮೊರೆ ಹೋಗಿರುವುದು, ನಿರಂತರ ಮೊಬೈಲ್ ಬಳಕೆಯಿಂದ ಸಮಯ ವ್ಯರ್ಥ ಮಾಡುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿದರು.

ಮಹಾವಿದ್ಯಾಲಯದ ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡಾ.ಪುಟ್ಟಮಣಿ ದೇವಿದಾಸ ಮಾತನಾಡಿ, ಗ್ರಾಮ ಸ್ವರಾಜ ಮಹಾತ್ಮ ಗಾಂಧಿಜಿಯವರ ಕನಸ್ಸಾಗಿತ್ತು. ಗ್ರಾಮಗಳು ಅಭಿವೃದ್ಧಿಗೊಳ್ಳಬೇಕು. ಶಿಬಿರದಲ್ಲಿ ಪ್ರತಿಯೊಬ್ಬ ಸ್ವಯಂಸೇವಕಿಯರು ಯಾವುದೇ ಭೇದ ಭಾವವಿಲ್ಲದೆ ಮೇಲು-ಕೀಳು ಎನ್ನದೆ ಎಲ್ಲರೂ ಸಮಾನರು. ಇದು ನಮಗಾಗಿ ಅಲ್ಲ, ನಿಮಗಾಗಿ ಆಗಿದೆ, ಇದರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಸೀಮಾ ಪಾಟೀಲ ಮಾತನಾಡಿ, ಈ ಕಾರ್ಯಕ್ರಮದಿಂದ ಆರೋಗ್ಯಯುತ ಭಾರತಕ್ಕೆ ಆರೋಗ್ಯಯುತ ಯುವಶಕ್ತಿ ಕುರಿತಾದ ವಿಷಯಗಳನ್ನು ಪ್ರತಿಯೊಬ್ಬ ಸ್ವಯಂ ಸೇವಕಿಯರು ತಿಳಿದುಕೊಳ್ಳಬೇಕು. ವಿದ್ಯಾರ್ಥಿಗಳು ಶಿಬಿರ ಲಾಭವನ್ನು ಪಡೆಯಬೇಕು. ಶಿಸ್ತು, ಶ್ರಮದಾನ, ಸೇವಾಮನೋಭಾವನೆ ರೂಢಿಸಿಕೊಳ್ಳಿ ಎಂದರು.

ಎನ್ನೆಸ್ಸೆಸ್ ಅಧಿಕಾರಿ ಡಾ.ರಾಜಲಕ್ಷ್ಮಿ ಡಿ. ಸ್ವಾಗತ ಮತ್ತು ಪ್ರಾಸ್ತಾವಿಕ ಮಾತನಾಡಿದರೆ, ಕಲ್ಪನಾ ಡಿ.ಮಹೇಂದ್ರಕರ್ ಅತಿಥಿ ಪರಿಚಯ ಮಾಡಿದರು. ಎ ಮತ್ತು ಬಿ ಘಟಕಗಳ ಶಿಬಿರಾರ್ಥಿಗಳು ಹಾಜರಿದ್ದರು. ಕು.ಸಾಧನಾ ಪವಾರ ನಿರೂಪಿಸಿದರು, ಕು. ಲಕ್ಷ್ಮಿ ಎಚ್. ವಂದಿಸಿದರು. ಗೋದಾವರಿ ಗುಂಪಿನ ಶಿಬಿರಾರ್ಥಿಗಳು ಪ್ರಾರ್ಥಿಸಿದರು.

ಡಾ.ಬಾಬು ಜಗಜೀವನರಾಂ ದೇಶದ ನಿಜವಾದ ಅನ್ನದಾತ : ಶಾಸಕ ಅಲ್ಲಮಪ್ರಭು ಪಾಟೀಲ್

ಕಲಬುರಗಿ,ಏ.06-

ದೇಶವು ಆಹಾರದ ತೀವ್ರ ಬಿಕ್ಕಟ್ಟನ್ನು ಎದುರಿಸುತ್ತಿದ್ದ ಸಂದರ್ಭದಲ್ಲಿ ಹಸಿರು ಕ್ರಾಂತಿಯ ಮೂಲಕ ಹಸಿವನ್ನು ನೀಗಿಸಿದ ಮಹಾನ್ ನಾಯಕರು ಡಾ. ಬಾಬು ಜಗಜೀವನರಾಂ ಎಂದು ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು.

ನಗರದ ಇಂದಿರಾ ಸ್ಮಾರಕ ಭವನದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಕಲಬುರಗಿ ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಡೆದ ಡಾ. ಬಾಬು ಜಗಜೀವನರಾಂ ಅವರ 119ನೇ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತವು ಹಸಿವಿನಿಂದ ಬಳಲುತ್ತಿದ್ದ ಕಾಲದಲ್ಲಿ ಕೃಷಿ ಸಚಿವರಾಗಿ ಅವರು ತಂದ ಕ್ರಾಂತಿಕಾರಿ ಬದಲಾವಣೆಗಳಿಂದ ದೇಶ ಇಂದು ಆಹಾರ ರಫ್ತು ಮಾಡುವ ಹಂತಕ್ಕೆ ತಲುಪಿದೆ. ಅವರು ಈ ದೇಶದ ನಿಜವಾದ ಅನ್ನದಾತ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರ ನಂತರ ಶೋಷಿತ ವರ್ಗಗಳ ಹಕ್ಕುಗಳಿಗಾಗಿ ಸಂಸತ್ತಿನಲ್ಲಿ ಪ್ರಬಲ ಧ್ವನಿ ಎತ್ತಿದವರು ಬಾಬುಜೀ. ಅವರ ಹೋರಾಟ ಮತ್ತು ಆಡಳಿತ ದಕ್ಷತೆ ಯುವಜನತೆಗೆ ಮಾದರಿ. ಮಹಾನ್ ಪುರುಷರ ಸಾಧನೆಗಳನ್ನು ಕೇವಲ ಭಾಷಣಕ್ಕೆ ಸೀಮಿತಗೊಳಿಸದೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.



ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್ ಮಾತನಾಡಿ, ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಮೂಲಾಧಾರ. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾಂ ತೋರಿದ ಹಾದಿಯಲ್ಲಿ ನಡೆಯಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಸಿಇಒ ಭಂವರ್ ಸಿಂಗ್ ಮೀನಾ ಮಾತನಾಡಿ, ಹಸಿರು ಕ್ರಾಂತಿಯ ಮೂಲಕ ಭಾರತವನ್ನು ಆಹಾರ ಸ್ವಾವಲಂಬನೆಯತ್ತ ಕೊಂಡೊಯ್ದ ನಾಯಕರು ಬಾಬುಜೀ ಎಂದು ಶ್ಲಾಘಿಸಿದರು.

ಪ್ರಾಚಾರ್ಯ ರಾಜಶೇಖರ ಮಾಂಗ ಅವರು ವಿಶೇಷ ಉಪನ್ಯಾಸ ನೀಡಿ, ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಬಾಬುಜಿಯವರ ತತ್ವಗಳನ್ನು ದೈನಂದಿನ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಇದಕ್ಕೂ ಮುನ್ನ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಅವರು ಟೌನ್ ಹಾಲ್ ಬಳಿಯ ಬಾಬುಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಜಗದೇವ ಗುತ್ತೇದಾರ್, ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ.,ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ಉಪವಿಭಾಗ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್, ಜಯಂತ್ಯುತ್ಸವ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ದೊಡ್ಡಮನಿ, ಗೌರವಾಧ್ಯಕ್ಷರಾದ ಶ್ಯಾಮ್ ನಾಟಿಕರ್ ಸೇರಿದಂತೆ ಸಮಾಜದ ಮುಖಂಡರು ಮಹೇಶ್ ಹುಬ್ಬಳ್ಳಿ, ಲಿಂಗರಾಜ್ ,ರಾಜು ವಾಡೇಕರ್ ಇತರರು ಹಾಜರಿದ್ದರು.

ಒಳಮೀಸಲಾತಿ ವಿಚಾರ ಕ್ಯಾಬಿನೆಟ್ ನಲ್ಲಿ ಚರ್ಚೆಗೆ ಒತ್ತಾಯ



ಅಫಜಲಪುರ,ಏ.06-

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತ ವತಿಯಿಂದ ಡಾ.ಬಾಬು ಜಗಜೀವನರಾಂ ಅವರ ಜಯಂತಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿತು. ಕಾರ್ಯಕ್ರಮವು ಜಯಂತಿ ಆಚರಣೆಯ ಜೊತೆಗೆ ಒಳಮೀಸಲಾತಿ ಕುರಿತ ಚರ್ಚೆಗೆ ವೇದಿಕೆಯಾಗಿದ್ದು ವಿಶೇಷತೆ ಕಂಡುಬಂತು.

ಈ ಸಂದರ್ಭದಲ್ಲಿ ಮಾತನಾಡಿದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ ಎಂವೈ ಪಾಟೀಲ್, ಡಾ.ಬಾಬು ಜಗಜೀವನರಾಂ ಅವರು ಶೋಷಿತ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ ಅಮೂಲ್ಯ ನಾಯಕರು ಎಂದು ಹೇಳಿದರು.

ಮಾದಿಗ ಸಮಾಜದ ಮುಖಂಡ ಶ್ರೀಕಾಂತ ಮಾಶಾಳಕರ ಪಟ್ಟಣದಲ್ಲಿ ಜಗಜೀವನರಾಂ ಅವರ ಮೂರ್ತಿ ಪ್ರತಿಷ್ಠಾಪನೆಗೆ ಸ್ಥಳ ಒದಗಿಸುವಂತೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಅರುಣಕುಮಾರ ಪಾಟೀಲ್, ಶೀಘ್ರದಲ್ಲೇ ಶಾಸಕರ ಗಮನಕ್ಕೆ ತಂದು ಮೂರ್ತಿ ಸ್ಥಾಪನೆ ಹಾಗೂ ಸಮುದಾಯ ಭವನ ನಿರ್ಮಾಣ ಕುರಿತು ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಯುವ ಮುಖಂಡ ಪರುಶುರಾಮ ಒಳಮೀಸಲಾತಿ ಪ್ರಶ್ನೆಯನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಒತ್ತಾಯಿಸಿ, ಮುಂದಿನ ವಿಶೇಷ ಕ್ಯಾಬಿನೆಟ್ ಸಭೆಯಲ್ಲಿ ಈ ವಿಷಯ ಚರ್ಚೆಯಾಗಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು. ಇದಕ್ಕೆ ಅರುಣಕುಮಾರ ಪಾಟೀಲ್ ಸಕಾರಾತ್ಮಕವಾಗಿ ಸ್ಪಂದಿಸಿದರು.

ಕಾರ್ಯಕ್ರಮದ ನೇತೃತ್ವ ವಹಿಸಿದ ತಹಸೀಲ್ದಾರ್ ಸಂಜೀವಕುಮಾರ ದಾಸರ ಮಾತನಾಡಿ, ಡಾ. ಬಾಬು ಜಗಜೀವನರಾಂ ಅವರು ಮಹಾತ್ಮ ಗಾಂಧಿ ಅವರಿಂದ ಪ್ರೇರಣೆ ಪಡೆದು ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿದ ಮಹಾನ್ ನಾಯಕರು ಎಂದು ಹೇಳಿದರು.

ಪಶುಸಂಗೋಪನಾ ಇಲಾಖೆ ಅಧಿಕಾರಿ ಎಚ್.ಎಂ. ಕೊಟೆ ಹಾಗೂ ಬಂಡಾಯ ಸಾಹಿತಿ ಬಿ.ಎಂ. ರಾವ ಅವರು ಜಗಜೀವನರಾಂ ಅವರ ಸಾಮಾಜಿಕ ಹೋರಾಟ ಹಾಗೂ ಕ್ರಾಂತಿಕಾರಿ ಚಿಂತನೆಗಳನ್ನು ಸ್ಮರಿಸಿದರು. ಬ್ಲಾಕ್ ಕಾಂಗ್ರೆಸ್ ತಾಲೂಕು ಅಧ್ಯಕ್ಷ ರಮೇಶ ಪೂಜಾರಿ ವಿಶೇಷ ಉಪನ್ಯಾಸ ನೀಡಿ ಅವರ ಜೀವನ ಹಾಗೂ ಸಾಧನೆಗಳನ್ನು ವಿವರಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಈರಣ್ಣ ಕವಲಗಿ, ಕೃಷಿ ಇಲಾಖೆ ಅಧಿಕಾರಿ ಎಸ್.ಎಚ್. ಗಡಗಿಮನಿ, ಸಮಾಜ ಕಲ್ಯಾಣಾಧಿಕಾರಿ ಅಶೋಕ ನಾಯಕ, ಆರೋಗ್ಯ ಇಲಾಖೆ ಅಧಿಕಾರಿ ಚೇತನ ಹಾಗೂ ತಾಲೂಕು ಮಾದಿಗ ಸಮಾಜದ ಅಧ್ಯಕ್ಷ ಲಕ್ಷ್ಮೀಪುತ್ರ ಬಬಲಾದ, ಭಾಗಣ್ಣ ಘತ್ತರಗಿ, ಶ್ರೀಕಾಂತ ಮಾಶಾಳರ್, ಶಿವಾನಂದ ಗಾಡಿಸಾಹುಕಾರ, ಮಾದಿಗ ಸಮಾಜದ ಮಾಜಿ ಅಧ್ಯಕ್ಷ ಗುಂಡಪ್ಪ ಕಾರಬೋಸಗಾ,ದತ್ತು ಘೂಳನೂರ, ಗುಂಡಪ್ಪ ಕಾರಬೋಸಗಾ, ಶರಣು ಕೇಸಾಪೂರ, ಕಾಳಪ್ಪ ಪೂಜಾರಿ ಹಿಂಚಗೇರಾ, ಚಂದ್ರಕಾಂತ ತೇಲರ್ಕ, ಚಂದಪ್ಪ ಕೆರಕನಳ್ಳಿ, ಭಾಗಣ್ಣ ಪಾಟೋಳಿ, ಸುನೀಲ ಕಟ್ಟಿಮನಿ, ಪರುಶರಾಂ ನಂದರ್ಗಿ, ಧರ್ಮಣ ಗಾಣಗಾಪೂರ,ಬಾಬು ಬೋಗನಳ್ಳಿ ಸೇರಿದಂತೆ ಅನೇಕರಿದ್ದರು.



ವಾರ್ತಾ ಇಲಾಖೆಯಲ್ಲಿ ಡಾ. ಬಾಬು ಜಗಜೀವನ ರಾಮ್ ಜನ್ಮ ದಿನಾಚರಣೆ

ಕೊಪ್ಪಳ ಏ.06-

ದೇಶದ ಹಸಿವು ನೀಗಿಸಿದ ಹಸಿರು ಕ್ರಾಂತಿಯ ಹರಿಕಾರ, ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಮ್ ರವರ 119ನೇ ಜನ್ಮ ದಿನಾಚರಣೆಯನ್ನು ಕೊಪ್ಪಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಭಾನುವಾರ ಆಚರಿಸಲಾಯಿತು.

ಕೊಪ್ಪಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ ಅವರು ಡಾ. ಬಾಬು ಜಗಜೀವನ ರಾಮ್ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ವಾರ್ತಾ ಇಲಾಖೆಯ ಸಿಬ್ಬಂದಿ ತಿಪ್ಪಯ್ಯ ನಾಯ್ಡು ಎಸ್., ಹೊರಗುತ್ತಿಗೆ ಸಿಬ್ಬಂದಿ ಮಂಜುನಾಥ, ಅಪ್ರೆಂಟಿಶಿಪ್ ಅಭ್ಯರ್ಥಿ ಕಿರಣ್ ಕುಮಾರ್ ಮತ್ತು ಲಕ್ಷ್ಮೀಕಾಂತ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಎಲ್.ಐ.ಸಿ. ವಿಮಾ ನೌಕರರ ಸಂಘದಿಂದ ನೀರಿ ಅರವಟಿಗೆ ಪ್ರಾರಂಭ

ಸಲ್ಲಿಸುತ್ತಿದ್ದಾರೆ, ಇಂತ ಕಾರ್ಯಕ್ರಮದ ಉದ್ಘಾಟನೆ ಮಾಡಿದ್ದು ನನಗೆ ತುಂಬಾ ಖುಷಿ ತಂದಿದೆ, ಇಲ್ಲಿಯ ನೌಕರರಲ್ಲದೇ ಈ ರಸ್ತೆಯ ಮಾರ್ಗದಲ್ಲಿ ಸಂಚರಿಸುವ ಸರ್ವ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು, ರಾಯಚೂರ ನಗರದಲ್ಲಿ ಹೆಚ್ಚಿನ ಬಿಸಿಲು ಇರುವುದರಿಂದ ಸ್ವಲ್ಪ ಬೇಸಿಗೆ ಬಿಸಿಲಿನ ದಾಹವನ್ನು ನೀಗಿಸಿಕೊಳ್ಳಲು ಇಂತ ಅರವಟಿಗೆಗಳ ಅಗತ್ಯವಾಗಿದೆ, ಈ ಸಂಘದ ಕಾರ್ಯ ತುಂಬಾ ಶ್ಲಾಘನೀಯವಾದುದು ಎಂದು ಹೇಳಿದರು.

ಸಾರ್ವಜನಿಕರ ನಂತರ ವಿಮಾ ನಿಗಮದ ನೌಕರರರೆಲ್ಲರೂ ಸಹಿತ ಉದ್ಘಾನೆಗಾಗಿ ತಯಾರಿಸಿದ ತಂಪು ಮಜ್ಜಿಗೆಯನ್ನು ಸೇವಿಸಿ ಸಂಘದ ಅಧ್ಯಕ್ಷರಾದ ಎಂ. ಶರಣಗೌಡ ಹಾಗೂ ಎಂ. ರವಿಯವರಿಗೆ ಧನ್ಯವಾದಗಳನ್ನು ತಿಳಿಸಿದರು. ನೂರಾರು ನೌಕರರು ಮತ್ತು ಸಾರ್ವಜನಿಕರು ಅರವಟಿಗೆಯ ನೀರನ್ನು ಸೇವಿಸಿದರು. ಈ ಸಂದರ್ಭದಲ್ಲಿ ಮಾರುಕಟ್ಟೆ ಪ್ರಬಂಧಕರಾದ ಎ. ಚಿರಜೀವಿ, ಮಾನವ ಸಂಪನ್ಮೂಲ ಪ್ರಬಂಧಕರಾದ ಸಿ.ಹೆಚ್. ವಂಶೀನಾಥ, ಕಛೇರಿ ನಿರ್ವಾಹಕ ಪ್ರಬಂಧಕರಾದ ಮನೀಷ್ ಝಾ, ವಿಮಾ ನೌಕರರ ಸಂಘದ ಪದಾಧಿಕಾರಿಗಳಾದ ವಿ.ಹೆಚ್. ರಾಘವೇಂದ್ರ, ಶ್ರೀಶೈಲ, ವೀರೇಶ, ಕ್ರಿಷ್ಣಮೂರ್ತಿ, ವೆಂಕಟೇಶ, ಸಂತೋಷಕುಮಾರ, ನಾಗರಾಜ ಹಾಗೂ ವಿಭಾಗೀಯ ಕಛೇರಿ, ಶಾಖಾ ಕಛೇರಿಯ ಸಿಬ್ಬಂಧಿಗಳು ಉಪಸ್ಥಿತರಿದ್ದರು.

ಏ.07ರಂದು ''ಶಾಂತರಸ ನೆನಪು'' ಕಾರ್ಯಕ್ರಮ

ಮಹಾವಿದ್ಯಾಲಯದ ಪ್ರಥಮ ವರ್ಷದ ವಿದ್ಯಾರ್ಥಿನಿ ಕು. ಮಮತಾ ಹಾಗೂ ಸಂಗಡಿಗರಿಂದ ಪ್ರಾರ್ಥನಾ ಗೀತೆಯೊಂದಿಗೆ ಕಾರ್ಯಕ್ರಮ ಆರಂಭವಾಗಲಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ರಂಗಪ್ಪ, ಚಂದ್ರಶೇಖರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಹೂಗಾರ ಸಮಾಜ ಸಂಘ ತಾಲೂಕ ಘಟಕ ಮಸ್ಕಿ ಶ್ರೀ ಶರಣ ಹೂಗಾರ ಮಾದಯ್ಯನವರ ಅದ್ದೂರಿ ಜಯಂತ್ಯೋತ್ಸವ

ಸಮಾಜ ಹಾಗೂ ಮಸ್ಕಿ ತಾಲೂಕಿನ ಎಲ್ಲ ಪದಾಧಿಕಾರಿಗಳು ಮತ್ತು ಎಲ್ಲಾ ತಾಲೂಕಿನ ಬಂಧುಗಳು ಜಿಲ್ಲಾ ಸಮಿತಿಯವರು ತಾಲೂಕ ಸಮಿತಿ ಯವರು ಸಮಸ್ತ ಮಸ್ಕಿ ತಾಲೂಕಿನ ಬಂಧುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯ ಕ್ರಮದಲ್ಲಿ ನಡೆದಾಡುವ ದೇವರು ಪೂಜ್ಯಶ್ರೀ ರುದ್ರಮುನಿ ಶಿವಾಚಾ ರ್ಯ ಮಹಾಸ್ವಾಮಿಗಳು ಹೂಗಾರ ಸಮಾಜ ಬಹಳ ಒಂದು ಸುಂದರ ಸಮಾಜ ಈ ಸಮಾಜದಲ್ಲಿ ಎಲ್ಲರೂ ಅನನ್ಯವಾಗಿ ಬದುಕು ಸಾಗಿಸಿದಾಗ ಮಾತ್ರ ಸಮಾಜದಲ್ಲಿ ಮುಂದೆ ಬರಲು ಸಾಧ್ಯವಾಗುತ್ತದೆ ಸಮಾಜ ಹಾಗು ಹೂಗಾರ್ ಸಮಾಜ ಎಲ್ಲ ಸಮಾಜದ ಬಾಂಧವರ ಜೊತೆ ತುಂಬಾ ಅನನ್ಯಬಾಂಧವ ಬಂದಿದ್ದು ಸಮಾಜದಲ್ಲಿ ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಮುಂದುವರೆಯ ಬೇಕು ಹೂಗಾರ್ ಸಮಾಜ ಅತ್ಯಂತ ಹಿಂದುಳಿದ ಸಮಾಜ ವಾಗಿದ್ದು ಈ ಸಮಾಜದಲ್ಲಿ ಎಲ್ಲರೂ ಸಮಾಜದ ಬಾಂಧವರು ಭೇದಭಾವವಿಲ್ಲದೆ ಮನಸ್ತಾಪವಿಲ್ಲದೆ ಒಗ್ಗಟ್ಟಾಗಿ ಸೇರಿ ಸಂಘಟನೆ ಮಾಡಿದಾಗ ಮಾತ್ರ ಸಮಾಜ ಅಭಿವೃದ್ಧಿಯಾಗಲು ಸಾಧ್ಯ ಎಂದು ಆಶೀರ್ವಚನ ನೀಡಿದರು.

ಸಮಾಜದ ಬಂಧುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು. ವಿರೂಪಾಕ್ಷಯ್ಯ ಸ್ವಾಮಿ ಸಾಲಿಮಠ ಅಂತರಗಂಗೆ ಮಸ್ಕಿ

ಜಕ್ಕಲದಿನ್ನಿ, ಬಿಜೆಪಿ ಸಂಸ್ಥಾಪನ ದಿನಾಚರಣೆ

ಭಾರತೀಯ ಜನತಾ ಪಾರ್ಟಿಗೆ 47 ವರ್ಷಗಳ ತುಂಬಿದ ಪ್ರಯುಕ್ತ ಇಂದು ನಮ್ಮ ಗ್ರಾಮದಲ್ಲಿ ಪ್ರಮುಖ ಕಾರ್ಯಕರ್ತರೊಂದಿಗೆ ಸಂಸ್ಥಾಪನ ದಿನಾಚರಣೆ ಆಚರಿಸಿ ಸಿಹಿ ಹಂಚಿ ಶುಭ ಕೋರಿಲಾಯಿತು

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ್ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರು ಶಿವರಾಜ್ ನಾಯಕ್ ಮಾಜಿ ವಿಎಸ್ಎಸ್ ಏನ್ ಉಪಾಧ್ಯಕ್ಷರು ಮಾಜಿ ಗ್ರಾಮ ಪಂಚಾಯತ್ ಸದಸ್ಯರು ಅಂಬರೀಶ್ ಮಡಿವಾಳ ನಾಗಪ್ಪ ನಾಯಕ್ ಅನಿಲ್ ಕುಮಾರ್ ನಿಂಗಯ್ಯ ಅಚ್ಚಳಿ ಚನ್ನಬಸವ ಹನುಮನ ಗೌಡ ಮುದಿಯಪ್ಪ ಅಗಸಿ ಮುಂದಿನಮನೆ ಯಮನಪ್ಪ ತುಪ್ಪದುರು ಹಾಗೂ ಬಿಜೆಪಿ ಪಕ್ಷದ ಯುವಕರು ಹಿರಿಯರು ಉಪಸ್ಥಿತರಿದ್ದರು

ಜಲದುರ್ಗಾ ಕೋಟೆ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲು ಕರವೇ ಒತ್ತಾಯ

ಸಂಜೆ ಜ್ವಾಲೆ

ಲಿಂಗಸಗೂರು, ಏ , 6

ತಾಲೂಕಿನ ಐತಿಹಾಸಿಕ ಪಾರಂಪರೆಗಳಲ್ಲಿ ಪ್ರಮುಖ ಸ್ಥಾನ ಹೊಂದಿರುವ ಜಲದುರ್ಗಾ ಕೋಟೆ ಹಲವು ವರ್ಷಗಳಿಂದ ನಿರ್ಲಕ್ಷ್ಯಕ್ಕೊಳಗಾಗಿ ಹಾಳಾಗುತ್ತಿರುವುದು ವಿಷಾದನೀಯ ಸಂಗತಿಯಾಗಿದೆ. ಈ ಕೋಟೆ ಪ್ರಾಚೀನ ಕಾಲದ ವೈಭವವನ್ನು ಸಾರುವ ಮಹತ್ವದ ಸ್ಮಾರಕವಾಗಿದ್ದು, ಇದನ್ನು ಸಂರಕ್ಷಿಸಿ ಅಭಿವೃದ್ಧಿಪಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಕರವೇ ಪ್ರವೀಣ್ ಕುಮಾರ್ ಶೆಟ್ಟಿ ಬಣದ ತಾಲೂಕ ಅಧ್ಯಕ್ಷ ಆಂಜನೇಯ ಹೆಚ್ ಭಂಡಾರಿ ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದರು

ಈ ಹಿಂದೆ ಪ್ರವಾಸೋದ್ಯಮ ಇಲಾಖೆಯಿಂದ ಉದ್ಯಾನವನ ಹಾಗೂ ಕಲ್ಲು ಬೆಂಚುಗಳನ್ನು ಅಳವಡಿಸಲಾಗಿತ್ತು. ಆದರೆ ನಿರ್ವಹಣೆ ಕೊರತೆಯಿಂದ ಎಲ್ಲವು ಹಾಳಾಗಿ ಹೋಗಿವೆ. ಪ್ರಸ್ತುತ ಕೋಟೆಯ ಸುತ್ತಮುತ್ತ ಸ್ವಚ್ಛತೆ ಕೊರತೆ, ಸುರಕ್ಷತಾ ವ್ಯವಸ್ಥೆಯ ಅಭಾವ, ಮೂಲಭೂತ ಸೌಕರ್ಯಗಳ ಲೋಪದಿಂದ ಸಾರ್ವಜನಿಕರು ಹಾಗೂ ಪ್ರವಾಸಿಗರು ಭೇಟಿ ನೀಡಲು ಅಸಾಧ್ಯವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೆಲವು ಬೇಡಿಕೆಗಳು ಕೈಗೊಳ್ಳಬೇಕು .

ಕೋಟೆಯ ಸುತ್ತಮುತ್ತ ಸ್ವಚ್ಛತೆ ಹಾಗೂ ಸಂರಕ್ಷಣೆ ಕಾರ್ಯಗಳನ್ನು ತಕ್ಷಣ ಪ್ರಾರಂಭಿಸಬೇಕು.

ಪ್ರವಾಸಿಗರಿಗಾಗಿ ರಸ್ತೆ, ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಮುಂತಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು.

ಕೋಟೆಯ ಇತಿಹಾಸವನ್ನು ಪರಿಚಯಿಸುವ ಫಲಕಗಳನ್ನು ಅಳವಡಿಸಬೇಕು.

ಸುರಕ್ಷತಾ ದೃಷ್ಟಿಯಿಂದ ಕಾವಲು ಸಿಬ್ಬಂದಿಯನ್ನು ನೇಮಿಸಬೇಕು.

ಸ್ಥಳೀಯ ಯುವಕರಿಗೆ ಮಾರ್ಗದರ್ಶಕರಾಗಿ ಉದ್ಯೋಗಾವಕಾಶ ಕಲ್ಪಿಸಬೇಕು.

ಜಲದುರ್ಗಾ ಕೋಟೆಯನ್ನು ಅಭಿವೃದ್ಧಿಪಡಿಸಿದರೆ ಸ್ಥಳೀಯ ಆರ್ಥಿಕತೆ ಬೆಳವಣಿಗೆಯಾಗುವುದರ ಜೊತೆಗೆ, ನಮ್ಮ ಐತಿಹಾಸಿಕ ಪರಂಪರೆ ಸಂರಕ್ಷಿತವಾಗುತ್ತದೆ. ಈ ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ತಮ್ಮ ಕಾರ್ಯಾಲಯದ ಮುಂದೆ ಪ್ರತಿಭಟನೆಯನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಹೇಳಿದರು .

ಈ ಸಂದರ್ಭದಲ್ಲಿ ತಾಲೂಕ ಉಪಾಧ್ಯಕ್ಷ ಎಲ್ ಭೀಮೇಶ್ ನಾಯಕ್ ಸೇರಿದಂತೆ ಇದ್ದರು .




ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಉಪ್ಪಿನ ಸತ್ಯಾಗ್ರಹ ಭಾರತ ಸ್ವಾತಂತ್ರ್ಯ ಹೋರಾಟದ ಪ್ರಮುಖ ಮೈಲುಗಲ್ಲು

ಸಿರುಗುಪ್ಪ ಏ.6-

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಉಪ್ಪಿನ ಸತ್ಯಾಗ್ರಹ ಒಂದು ಪ್ರಮುಖ ಮೈಲುಗಲ್ಲು ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಶಾಂತಿ ಸಭೆ ಸದಸ್ಯರು ಸಾಮಾಜಿಕ ಕಾರ್ಯಕರ್ತ ಅಬ್ದುಲ್ ನಬಿ ಅವರು ಹೇಳಿದರು ಸಿರುಗುಪ್ಪ ನಗರದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಸರ್ಕಲ್ ನಲ್ಲಿ ಮಹಾತ್ಮ ಗಾಂಧೀಜಿ ಪ್ರತಿಮೆಗೆ ಮಾಲಾರ್ಪಣೆ ಗೌರವ ನಮನ ಸ್ಮರಿಸಿದ ಅವರು ಮಾತನಾಡುತ್ತಾ



97ನೇ ಉಪ್ಪಿನ ಸತ್ಯಾಗ್ರಹ ದಿನವನ್ನು ನೆನಪಿಸಿ ಮಾತನಾಡಿ ಬ್ರಿಟಿಷರು ರೂಪಿಸಿದ ಕಾನೂನನ್ನು ಉಲ್ಲಂಘಿಸುವುದೇ ಇದರ ಉದ್ದೇಶವಾದ್ದರಿಂದ ಇದನ್ನು ಕಾನೂನು ಭಂಗ ಚಳವಳಿ ಎಂದೂ ಕರೆಯಲಾಗಿದೆ ಉಪ್ಪಿನ ಸತ್ಯಾಗ್ರಹದಲ್ಲಿ ಭಾಗವಹಿಸಲು ಮಹಾತ್ಮ ಗಾಂಧಿ ಅವರು 1930 ರ ಮಾರ್ಚ್ 12ರಂದು ಸಬರಮತಿ ಆಶ್ರಮದಿಂದ ಪಾದಯಾತ್ರೆ ಮೂಲಕ 240 ಕಿ. ಮೀ. ನಡೆದು ದಂಡಿ ಎಂಬಲ್ಲಿಗೆ ತಲುಪಿದ್ದು 1930 ರ ಏಪ್ರಿಲ್ 6 ರಂದು ಹಾಗಾಗಿ ಇದನ್ನು ದಂಡಿ ಉಪ್ಪಿನ ಸತ್ಯಾಗ್ರಹ ಎಂದು ಕರೆಯಲಾಗುತ್ತದೆ ಜನಾಭಿಪ್ರಾಯ ಮುಖಂಡರು ಅಬ್ದುಲ್ ನಬಿ ಅವರು ವಿವರಿಸಿದರು.

ಡಾ.ಬಾಬು ಜಗಜೀವನರಾಮ್ ಮತ್ತು ಅಂಬೇಡ್ಕರ್ ಅವರು ನಮ್ಮಗೆ ಎರಡು ಕಣ್ಣುಗಳು- ಹೇಮಲತಾ ನಾಯಕ

ಕೊಪ್ಪಳ ಏ.06-

ಸಮಾಜದಲ್ಲಿ ಸರ್ವರಿಗೂ ಸಮಾನತೆಗಾಗಿ ಹೋರಾಡಿದ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬು ಜಗಜೀವನರಾಮ್ ಈ ಇಬ್ಬರು ಮಹನೀಯರು ನಮ್ಮ ಎರಡು ಕಣ್ಣುಗಳಿದ್ದಂತೆ ಎಂದು ಕೊಪ್ಪಳ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಹೇಳಿದರು



ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತ ಆಶ್ರಯದಲ್ಲಿ ಭಾನುವಾರದಂದು ನಗರದ ಸಾಹಿತ್ಯ ಭವನದಲ್ಲಿ ಹಮ್ಮಿಕೊಂಡಿದ್ದ 'ಹಸಿರು ಕ್ರಾಂತಿ'ಯ ರೂವಾರಿ ಡಾ. ಬಾಬು ಜಗಜೀವನ ರಾಮ್ ರವರ 119ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶೋಷಿತ ವರ್ಗದ ಕಣ್ಣೀರು ಒರೆಸುವ ಕೆಲಸವನ್ನು ಬಾಬು ಜಗಜೀವನ್ ರಾಮ್ ರವರು ಮಾಡಿದ್ದಾರೆ. ದೇಶದಲ್ಲಿ ಆಹಾರದ ಕೊರತೆ ಉಂಟಾದಾಗ ಆಹಾರ ಉತ್ಪಾದನೆಗೆ ಒತ್ತು ಕೊಟ್ಟು, ಅದಕ್ಕೆ ಪೂರಕವಾಗಿ ಕೈಗೊಂಡ ಕ್ರಮಗಳಿಂದಾಗಿ ಜಗಜೀವನ ರಾಮ್ ಅವರಿಗೆ ಹಸಿರು ಕ್ರಾಂತಿಯ ಹರಿಕಾರರೆಂದು ಕರೆಯಲಾಗುತ್ತದೆ. ದೇಶಕ್ಕೆ, ಶ್ರಮಿಕ ಹಾಗೂ ಶೋಷಿತ ವರ್ಗಕ್ಕೆ ಅವರು ಅನೇಕ ಕೊಡುಗೆಗಳನ್ನು ನೀಡಿದ್ದಾರೆ. ಡಾ. ಬಾಬು ಜಗಜೀವನ ರಾವ್ ರವರ ಜೀವನ ಸಾಧನೆಗಳು ಸಮಾಜಕ್ಕೆ ದಾರಿದೀಪವಾಗಿದ್ದು, ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಮಹತ್ವವನ್ನು ಜನರಿಗೆ ತಿಳಿಸಿವೆ. ಅವರ ಆದರ್ಶಗಳನ್ನು ಯುವ ಪೀಳಿಗೆ ಅಳವಡಿಸಿಕೊಳ್ಳಬೇಕು ಎಂದರು.

ಜಿಲ್ಲಾಧಿಕಾರಿಗಳಾದ ಡಾ.ಸುರೇಶ್ ಬಿ. ಇಟ್ನಾಳ ಅವರು ಮಾತನಾಡಿ, ಭಾರತದ ಕೃಷಿ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಬಾಬುಜಿಯವರ ಕೊಡುಗೆ ಅನನ್ಯವಾಗಿದೆ. ಅವರು ಹಾಕಿಕೊಟ್ಟ ಸಾಮಾಜಿಕ ಸಮಾನತೆಯ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕಿದೆ. 1968ರಲ್ಲಿ ಬಾಬು ಜಗಜೀವನ ರಾಮ್ ಅವರ ರಾಜಕೀಯ ಜೀವನದಲ್ಲಿ ಅತ್ಯಂತ ಮಹತ್ವದ ಘಟ್ಟವಾಗಿತ್ತು. ಆ ಸಮಯದಲ್ಲಿ ಅವರು ಭಾರತದ ಕೇಂದ್ರ ಕೃಷಿ ಮತ್ತು ಆಹಾರ ಸಚಿವರಾಗಿ ಸೇವೆ ಸಲ್ಲಿಸಿದರು. 1968ರ ಅವಧಿಯಲ್ಲಿ ದೇಶವು ಆಹಾರದ ಬಿಕ್ಕಟ್ಟಿನಲ್ಲಿದ್ದಾಗ, ಡಾ. ಬಾಬು ಜಗಜೀವನ ರಾಮ್ ರವರು ತೋರಿದ ದೃಢ ನಿರ್ಧಾರಗಳು ಮತ್ತು ಅದು ನಾಯಕತ್ವ ಇಂದಿಗೂ ಸ್ಮರಣೀಯ. ಕೃಷಿ ಸಚಿವರಾಗಿ ಅವರು ಜಾರಿಗೆ ತಂದ ಕ್ರಾಂತಿಕಾರಿ ಯೋಜನೆಗಳ ಫಲವಾಗಿ ಭಾರತವು ಆಹಾರದ ದಾಸ್ತಾನು ಮಾಡುವಲ್ಲಿ ಯಶಸ್ವಿಯಾಯಿತು. 1968ರ ಹಸಿರು ಕ್ರಾಂತಿಯ ಯಶಸ್ಸು ಬಾಬುಜಿಯವರ ಆಡಳಿತಾತ್ಮಕ ಚಾಕಚಕ್ಯತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಕುಕನೂರು ತಾಲ್ಲೂಕು ಮಂಗಳೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಪ್ರಾಧ್ಯಾಪಕರಾದ ಡಾ.ಪ್ರಭುರಾಜ ಕೆ.ಎನ್. ಅವರು ವಿಶೇಷ ಉಪನ್ಯಾಸ ನೀಡಿ, ಡಾ. ಬಾಬು ಜಗಜೀವನ ರಾಮ್ ರವರು ಭಾರತದ ಸ್ವಾತಂತ್ರ್ಯ ಹೋರಾಟಗಾರರು, ಸಮಾಜ ಸುಧಾರಕರು ಹಾಗೂ ರಾಜಕಾರಣಿಗಳಲ್ಲಿ ಪ್ರಮುಖ ಸ್ಥಾನ ಪಡೆದವರು. ಅವರ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ತಮ್ಮ ಜೀವನವನ್ನೇ ಅರ್ಪಿಸಿದ ಮಹಾತ್ಮರು. ಅವರು 1920ರಲ್ಲಿ ದಶಕದ ಸ್ವಾತಂತ್ರ್ಯ ಚಳುವಳಿಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಮಹಾತ್ಮ ಗಾಂಧಿಜೀಯವರ ಮಾರ್ಗದರ್ಶನದಲ್ಲಿ ಹೋರಾಟ ನಡೆಸಿದರು. ಜಗಜೀವನ ರಾಮ್ ರವರು ದಲಿತ ಸಮುದಾಯದ ಹಕ್ಕುಗಳಿಗಾಗಿ ಧೈರ್ಯದಿಂದ ಹೋರಾಡಿ, ಸಮಾಜದಲ್ಲಿ ಸಮಾನ ಅವಕಾಶಗಳು ಲಭಿಸುವಂತೆ ಶ್ರಮಿಸಿದವರು. ಸ್ವಾತಂತ್ರ್ಯ ನಂತರ ಅವರು ಕೇಂದ್ರ ಸಚಿವರಾಗಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿ ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ವಿಶೇಷವಾಗಿ ಕೃಷಿ, ರಕ್ಷಣಾ ಹಾಗೂ ಕಾರ್ಮಿಕ ಕ್ಷೇತ್ರಗಳಲ್ಲಿ ಅವರು ಕೈಗೊಂಡ ಕ್ರಮಗಳು ದೇಶದ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಗೆ ಪೂರಕವಾಗಿವೆ. 'ಸಮಾನತೆ ಇಲ್ಲದೆ ಸ್ವಾತಂತ್ರ್ಯ ಸಂಪೂರ್ಣವಾಗುವುದಿಲ್ಲ' ಎಂಬುದು ಡಾ. ಬಾಬು ಜಗಜೀವನ ರಾಮ್ ರವರ ಜೀವನದ ಪ್ರಮುಖ ಸಂದೇಶವಾಗಿದೆ. ಈ ಚಿಂತನೆ ಇಂದಿಗೂ ಪ್ರಸ್ತುತವಾಗಿದ್ದು, ಯುವಪೀಳಿಗೆಗೆ ಪ್ರೇರಣೆಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣ ಮೂರ್ತಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೋಗಲದ, ಸಮಾಜದ ಮುಖಂಡರಾದ ಗಾಳೆಪ್ಪ ಪೂಜಾರ್, ಗವಿಸಿದ್ದಪ ಕಂದಾರಿ, ಚನ್ನಬಸಪ್ಪ ಹೊಳೆಯಪ್ಪನವರ, ಡಾ. ಜ್ಞಾನಸುಂದರ, ಗವಿಸಿದ್ದಪ್ಪ ಗಿಣಿಗೇರಾ, ಜಿ.ಎಂ ಬಲ್ಲದ್, ರಮೇಶ ಗಿಣಿಗೇರಿ, ಸಿದ್ರಾಮ ಹೊಸಮನಿ, ರಾಮಣ್ಣ ಚೌಡ್ಕಿ, ಮಲ್ಲಿಕಾರ್ಜುನ ಪೂಜಾರ್, ಚಂದ್ರುಸ್ವಾಮಿ ಬಹದ್ದೂರ್ ಬಂಡಿ, ಮಲ್ಲು, ಹನುಮೇಶ ಕಡೇಮನಿ, ದ್ಯಾಮಣ್ಣ ಚಾಮಲಾಪೂರ, ರಾಮಣ್ಣ ಕಂದಾರಿ ಹಾಗೂ ಹಲವು ಮುಖಂಡರು, ಇತರೆ ಜನಪ್ರತಿನಿಧಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

★ಮಹನೀಯರ ಪುತ್ಥಳಿಗಳಿಗೆ ಮಾಲಾರ್ಪಣೆ:★ ಡಾ. ಬಾಬು ಜಗಜೀವನ ರಾಮ್ ರವರ 119ನೇ ಜನ್ಮ ದಿನಾಚರಣೆಯ ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಮತ್ತು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಹಯೋಗದಲ್ಲಿ ನಗರದ ಹೊಸಪೇಟೆ ರಸ್ತೆಯ ಕಿಶೋರಿ ಪೆಟ್ರೋಲ್ ಬಂಕ್ ಹತ್ತಿರದ ಶಿವಶಾಂತವೀರ ನಗರದ ಅಂಬಿಗರ ಚೌಡಯ್ಯ ಉದ್ಯಾನವನದಲ್ಲಿರುವ ಮಹನೀಯರ (ಅಂಬೇಡ್ಕರ್, ಬಸವೇಶ್ವರ ಹಾಗೂ ಬಾಬು ಜಗಜೀವನ್‌ರಾಂ ರವರ) ಪುತ್ಥಳಿಗಳಿಗೆ ಮಾಲಾರ್ಪಣೆ ಮಾಡಲಾಯಿತು.

★ಅದ್ದೂರಿ ಮೆರವಣಿಗೆ:★ ಹಸಿರು ಕ್ರಾಂತಿ'ಯ ರೂವಾರಿ ಡಾ. ಬಾಬು ಜಗಜೀವನ ರಾಮ್ ರವರ 119ನೇ ಜನ್ಮ ದಿನಾಚರಣೆ ಅಂಗವಾಗಿ ಕೊಪ್ಪಳ ತಹಶೀಲ್ದಾರ ಕಛೇರಿ ಆವರಣದಿಂದ ನಡೆದ ಡಾ.ಬಾಬು ಜಗಜೀವನ ರಾಮ್ ರವರ ಭಾವಚಿತ್ರಕ್ಕೆ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಜಿಲ್ಲಾಧಿಕಾರಿಗಳಾದ ಡಾ.ಸುರೇಶ್ ಬಿ. ಇಟ್ನಾಳ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ ಅವರು ಪುಷ್ಪ ನಮನ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಗದೀಶ್, ಡಿಡಿಪಿಐ ಸೋಮಶೇಖರಗೌಡ ಪಾಟೀಲ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಕೊಪ್ಪಳ ತಹಶೀಲ್ದಾರ ಕಛೇರಿಯ ಬಸವರಾಜ ತನ್ನಳ್ಳಿ, ತಾಲೂಕು ಪಂಚಾಯತ್ ಇಒ ದುಂಡಪ್ಪ ತುರಾದಿ, ಕೊಪ್ಪಳ ಸಮಾಜ ಕಲ್ಯಾಣ ಅಧಿಕಾರಿ ಶರಣಪ್ಪ, ವಿವಿಧ ಸಂಘಟನೆಗಳ ಮುಖಂಡರು ಮತ್ತು ನಗರಸಭೆ, ಸಮಾಜ ಕಲ್ಯಾಣ ಇಲಾಖೆ ಕಚೇರಿ ಸಿಬ್ಬಂದಿ ಹಾಗೂ ತಹಶೀಲ್ದಾರರು ಕಚೇರಿ ಸಿಬ್ಬಂದಿಗಳು ಸೇರಿದಂತೆ ಇತರರು ಇದ್ದರು.

ಮೆರವಣಿಗೆಯು ತಹಶೀಲ್ದಾರ ಕಛೇರಿಯ ಆವರಣದಿಂದ ಆರಂಭವಾಗಿ ಸಾಲಾರಜಂಗ್ ರಸ್ತೆ, ಗಡಿಯರ ಕಂಬದ ಮಾರ್ಗವಾಗಿ ಗಾಂಧಿ ಭವನ, ಅಶೋಕ ವೃತ್ತದ ಮೂಲಕ ಸಾಹಿತ್ಯ ಭವನದವರೆಗೆ ಅದ್ದೂರಿಯಾಗಿ ನಡೆಯಿತು. ಮೆರವಣಿಗೆಯಲ್ಲಿ ಡೊಳ್ಳು ಕುಣಿತ ಮತ್ತು ಇತರೆ ಕಲಾತಂಡಗಳು ಪ್ರದರ್ಶನ ನೀಡುವ ಮೂಲಕ ಸಂಭ್ರಮವನ್ನು ಹೆಚ್ಚಿಸಿದವು.



ಡಾ.ಬಾಬು ಜಗಜೀವನ ರಾಮ್ ಅಪ್ರತಿಮ ನಾಯಕ : ಸಚಿವ ರಹೀಂ ಖಾನ್

ಬೀದರ್ ,ಏ.06-

ಭಾರತದ ಹಸಿರು ಕ್ರಾಂತಿಯ ಹರಿಕಾರರೆಂದೇ ಖ್ಯಾತರಾದ ಬಾಬು ಜಗಜೀವನ್ ರಾಮ್ ಅವರು ಶೋಷಿತ ಸಮುದಾಯದಿಂದ ಬಂದು ದೇಶದ ಉಪಪ್ರಧಾನಿ ಹುದ್ದೆಯವರೆಗೆ ಏರಿದ ಅಪ್ರತಿಮ ನಾಯಕ ಎಂದು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಂ ಖಾನ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯವರ ಸಂಯುಕ್ತಾಶ್ರಯದಲ್ಲಿ ರವಿವಾರ ನಗರದ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಆಯೋಜಿಸಿದ ಡಾ.ಬಾಬು ಜಗಜೀವನ ರಾಮ್ ಅವರ 119ನೇ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

1970ರ ದಶಕದಲ್ಲಿ ಭಾರತವು ಎದುರಿಸುತ್ತಿದ್ದ ತೀವ್ರ ಆಹಾರ ಸಮಸ್ಯೆಯನ್ನು ನೀಗಿಸಿ, ಕೃಷಿಯಲ್ಲಿ ದೇಶವನ್ನು ಸ್ವಾವಲಂಬಿಯಾಗಿಸಿದ ಕೀರ್ತಿ ಬಾಬು ಜಗಜೀವನ ರಾಮ್ ಅವರಿಗೆ ಸಲ್ಲುತ್ತದೆ. ಆದ್ದರಿಂದಲೇ ಅವರ ಜನ್ಮದಿನವಾದ ಎ.5ರಂದು ನಾವು ಸಮತಾ ದಿನ ಎಂದು ಆಚರಿಸುತ್ತೇವೆ.

ಸುಮಾರು ಮೂರು ದಶಕಗಳ ಕಾಲ ಕೇಂದ್ರ ಸಚಿವರಾಗಿ, ರಕ್ಷಣಾ ಸಚಿವರಾಗಿ 1971ರ ಯುದ್ಧದ ಸಮಯದಲ್ಲಿ ಮತ್ತು ಕೃಷಿ ಸಚಿವರಾಗಿ ಅವರು ನೀಡಿದ ಕೊಡುಗೆ ಅನನ್ಯವಾಗಿದೆ. ಸಮಾನತೆಯ ಸಿದ್ಧಾಂತದ ಪ್ರತಿಪಾದಕರಾಗಿದ್ದ ಬಾಬೂಜಿಯವರು ಹಾಕಿಕೊಟ್ಟ ದಾರಿಯಲ್ಲಿ ನಡೆಯುವುದು ಇಂದಿನ ಸಮಾಜಕ್ಕೆ ಅತ್ಯಗತ್ಯವಾಗಿದೆ ಎಂದರು.

ಜಿಲ್ಲೆಯಲ್ಲಿ ಬಾಬು ಜಗಜೀವನರಾಮ್ ಅವರ ಭವನ ನಿರ್ಮಾಣಕ್ಕೆ ಈಗಾಗಲೇ 2 ಕೋಟಿ ರೂ. ಅನುದಾನ ನೀಡಲಾಗಿದೆ. ಅವಶ್ಯಕತೆಗೆ ಅನುಗುಣವಾಗಿ ಇನ್ನು ಹೆಚ್ಚಿನ ಅನುದಾನ ನೀಡಲಾಗುವುದು. ವೃತ್ತ ನಿರ್ಮಾಣದ ಬಗ್ಗೆ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಲಾಗುವುದು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಅಪರ್ ಜಿಲ್ಲಾಧಿಕಾರಿ ಶಿವಾನಂದ್ ಕರಾಳೆ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಡಾ. ಯೋಗೇಶ್ ಎಸ್. ಬಿ., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ್ ಸಿಂಧೆ, ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ, ಪ್ರಮುಖರಾದ ಚಂದ್ರಕಾಂತ್ ಹಿಪ್ಪಳಗಾಂವ್, ಫಾರ್ನಾಡಿಸ್ ಹಿಪ್ಪಳಗಾಂವ್, ಮಾರುತಿ ಬೌದ್ದೆ, ರಾಜು ಕಡ್ಯಾಳ್, ವಿಜಯಕುಮಾರ್ ಸೋನಾರೆ, ರವಿರಾಜ್ ಘೋಡೆ, ಅಭಿ ಕಾಳೆ, ಶಾಮಣ್ಣ ಬಾವಗೆ, ಮಹೇಶ್ ದೊಡ್ಡಿ, ಶಾಮಣ್ಣ ಬೊಂಬಳಗಿ ಹಾಗೂ ರವಿ ನಿಜಾಮಪುರ್ ಸೇರಿದಂತೆ ಅನೇಕ ಮುಖಂಡರು ಹಾಗೂ ಸಮಾಜದ ಬಂಧುಗಳು ಉಪಸ್ಥಿತರಿದ್ದರು.



ಕಾಳಗಿ,ಏ.06-

ಸತ್ಯಮಾರ್ಗದ ರಾಜಕೀಯಕ್ಕೆ ಹೆಚ್ಚಿನ ಒತ್ತು ನೀಡಿದ ಕ್ರಾಂತಿ ಪುರುಷ ಡಾ.ಬಾಬು ಜಗಜೀವನರಾವ್ ಅವರು ದೇಶದ ರಕ್ಷಣೆ ಹಾಗೂ ಅಭಿವೃದ್ಧಿಗಾಗಿ ತಮ್ಮ ಜೀವನವನ್ನೇ ಸಮರ್ಪಿಸಿದ ಮಹಾನ್ ನಾಯಕರೆಂದು ತಹಶೀಲ್ದಾರ್ ಪೃಥ್ವಿರಾಜ ಪಾಟೀಲ್ ಹೇಳಿದರು.

ಪಟ್ಟಣದ ತಹಸೀಲ್ ಕಾರ್ಯಾಲಯದಲ್ಲಿ ರವಿವಾರ ಅವರ 119ನೇ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ದೇಶವನ್ನು ಹಸಿವು ಮುಕ್ತಗೊಳಿಸಲು ರೈತರ ಶಕ್ತಿಯನ್ನು ಅರಿತ ಬಾಬೂಜೀ ತಮ್ಮ ಅಧಿಕಾರ ಅವಧಿಯಲ್ಲಿ ಹಸಿರು ಕ್ರಾಂತಿ ಮೂಲಕ ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದರು.

ಸಾಮಾಜಿಕ ನ್ಯಾಯ, ಆರ್ಥಿಕ ಪ್ರಗತಿ, ಬಡತನ ನಿರ್ಮೂಲನೆ, ದೀನ-ದಲಿತರ ಹಾಗೂ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಅವರು ಹೋರಾಟ ನಡೆಸಿದ್ದರು. ಅಸ್ಪೃಶ್ಯತೆ ನಿರ್ಮೂಲನೆ ಹಾಗೂ ಬಡವರಿಗೆ ನ್ಯಾಯ ಒದಗಿಸುವುದು ಅವರ ಪ್ರಮುಖ ಗುರಿಯಾಗಿತ್ತು ಎಂದು ಹೇಳಿದರು.

ಇಂತಹ ಮಹಾನ್ ನಾಯಕರ ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗದೇ, ಅವರ ಆದರ್ಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಶಾಂತಿ ಹಾಗೂ ಸುಸ್ಥಿರ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪಂಕಜಾ ಎ., ಮಾದಿಗ ಸಮಾಜದ ಹಿರಿಯ ಮುಖಂಡ ರೇವಣಸಿದ್ದ ಕಟ್ಟಿಮನಿ, ಸುಂದರ ಸಾಗರ, ಪಪಂ ಮಾಜಿ ಸದಸ್ಯ ಸೂರ್ಯಕಾಂತ ಕಟ್ಟಿಮನಿ ಸೇರಿದಂತೆ ಹಲವರು ಮಾತನಾಡಿದರು.

ಕಾಳಗಿ ಪಟ್ಟಣ ಪಂಚಾಯಿತಿ ಸೇರಿದಂತೆ ತಾಲೂಕಿನ ವಿವಿಧ ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳು ಹಾಗೂ ಸಂಘ-ಸಂಸ್ಥೆಗಳಲ್ಲಿ ಸಹ ಡಾ. ಬಾಬು ಜಗಜೀವನರಾಮ್ ಅವರ ಜಯಂತಿಯನ್ನು ಆಚರಿಸಲಾಯಿತು.

ಈ ವೇಳೆ ಗ್ರೇಡ್ -2 ತಹಶೀಲ್ದಾರ್ ರಾಜೇಶ್ವರಿ, ಜಯಂತೋತ್ಸವ ಸಮಿತಿ ಅಧ್ಯಕ್ಷ ಶರಣು ರಾಜಾಪೂರ, ಪಂಚಗ್ಯಾರಂಟಿ ಸಮಿತಿ ತಾಲೂಕಾಧ್ಯಕ್ಷ ರಾಘವೇಂದ್ರ ಡಿ.ಗುತ್ತೇದಾರ, ಸಿದ್ರಾಮಸ್ವಾಮಿ, ಪಪಂ.ಸದಸ್ಯರಾದ ಗುರು ಮದ್ದೂರ, ಬಸವರಾಜ ಮಡಿವಾಳ, ರಮೇಶ ಕಿಟ್ಟದ, ಶರಣಪ್ಪ ಬೇಲೂರ, ದತ್ತಾತ್ರೇಯ ಗುತ್ತೇದಾರ, ಮೈಹಿಬೂಬೇಗ ಬಿಜಾಪೂರ, ಚಂದ್ರಕಾಂತ ಕಾಳೇರ, ರಾಜೇಂದ್ರಬಾಬು ಹೀರಾಪೂರಕರ್, ಹೀರಾಲಾಲ್ ಸಾಬನೆ, ಶಿವಕುಮಾರ ಚಿಂತಕೋಟಿ, ಪರಮೇಶ್ವರ ಕಟ್ಟಿಮನಿ, ಮಲ್ಲಿಕಾರ್ಜುನ ಸಿಂಗೆ, ಮಹೇಶ ಭರತನೂರ, ಕರಣ ರಾಜಾಪೂರ ಸೇರಿದಂತೆ ಅನೇಕರಿದ್ದರು.

ಡಾ. ಬಾಬು ಜಗಜೀವನ್ ರಾವ್ ಜಯಂತಿ ಆಚರಣೆ

ಕಲಬುರಗಿ,ಏ.06-

ರೈತಕುಲದ ಉದ್ಧಾರಕ ಹಾಗೂ ಹಸಿರು ಕ್ರಾಂತಿಯ ಹರಿಕಾರರಾದ ಡಾ.ಬಾಬು ಜಗಜೀವನ್ ರಾವ್ ಅವರ ಜಯಂತಿಯನ್ನು ಜೇವರ್ಗಿ ಪಟ್ಟಣದ ತಾಲ್ಲೂಕು ಆಡಳಿತ ವತಿಯಿಂದ ರವಿವಾರ ಭಕ್ತಿ ಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಪಂಚ ಗ್ಯಾರೆಂಟಿ ಸಮಿತಿ ಅಧ್ಯಕ್ಷ ಶೌಕತ್ ಅಲಿ ಆಲೂರು, ಡಾ.ಜಗಜೀವನ್ ರಾವ್



ಅವರು ರೈತರ ಅಭಿವೃದ್ಧಿಗಾಗಿ ಶ್ರಮಿಸಿದ ಮಹಾನ್ ನಾಯಕರು ಎಂದು ಹೇಳಿದರು. ಅವರು ಹಸಿರು ಕ್ರಾಂತಿಯ ಹರಿಕಾರರಾಗಿದ್ದು, ರೈತರ ಕಣ್ಮಣಿಯಾಗಿದ್ದರು ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ್ ಮಲ್ಲಣ್ಣ ಯಲ್ಗೋಡ್ ಮಾತನಾಡಿ, ರೈತರಿ ಗಾಗಿ ಅನೇಕ ನೀರಾವರಿ ಯೋಜ ನೆಗಳು ಮತ್ತು ಸರ್ಕಾರದ ಸೌಲಭ್ಯ ಒದಗಿಸಲು ಪ್ರಾಮಾ ಣಿಕ ಪ್ರಯತ್ನ ಮಾಡಿದ ನಾಯಕರಲ್ಲಿ ಡಾ.ಜಗಜೀವನ್ ರಾವ್ ಪ್ರಮುಖರು ಎಂದು ಹೇಳಿದರು.


ಈ ಸಂದರ್ಭದಲ್ಲಿ ಸಮಾಜ ಕಲ್ಯಾಣಾಧಿಕಾರಿ ಸತೀಶ್, ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ರವಿ ಚಂದ್ರ ಲಕ್ಕುಂಡಿ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ದಾನಪ್ಪ ಗೌಡ ಹಳಿಮನಿ, ಜಯಂತೋತ್ಸವ ಸಮಿತಿ ಅಧ್ಯಕ್ಷ ಸಕಪ್ಪ ಕೋಭಾಳಕರ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಮಾದಿಗ ಸಮಾಜದ ಮುಖಂಡ ಈಶ್ವರ ಹಿಪ್ಪರಗಿ, ಅನಿಲ್ ದೊಡ್ಡ ಮನಿ, ಮಹೇಶ್ ಕೆಂಬಾಯಿ, ಭೀಮರಾಯ ಬಡಿ ಗೇರ, ಲಕ್ಷ್ಮಣ್ ಡೊಳ್ಳೆ, ಸುಭಾಸ್ ಡೊಳ್ಳೆ, ಅಂಬ್ರೇಶ್ ಮದವಾಳ ಸೇರಿದಂತೆ ಇನ್ನಿತರರು ಹಾಜರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ವಿವಾದಗಳ ಗೊಚ್ಚೆಯಲ್ಲಿ ಸಿಲುಕಿರುವ ಕೇರಳ ಬಿಜೆಪಿ: ಮತ ಬ್ಯಾಂಕ್‌ಗಾಗಿ ತೊಳಲಾಟ



ತನ್ನ ವಿವಾದವನ್ನು ಮುಚ್ಚಿಹಾಕುವುದರಲ್ಲೇ ಬಿಜೆಪಿ ಸಮಯ ಕಳೆದುಹೋಗುತ್ತಿದೆ. ಬಿಜೆಪಿ ತನ್ನ ವಿರೋಧಿಗಳೊಂದಿಗೆ ಹೋರಾಡುತ್ತಿದೆಯೇ ಅಥವಾ ತನ್ನದೇ ಆದ ತಪ್ಪು ಹೆಜ್ಜೆಗಳ ವಿರುದ್ಧ ಹೋರಾಡುತ್ತಿದೆಯೇ ಎಂಬುದು ಪ್ರಶ್ನೆಯಾಗಿಯೇ ಉಳಿದಿದೆ.

ಇನ್ನು ಕೆಲವೇ ದಿನಗಳಲ್ಲಿ ಕೇರಳದಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ಯುಡಿಎಫ್, ಎಲ್‌ಡಿಎಫ್ ಭರ್ಜರಿಯಾಗಿ ಪ್ರಚಾರ ನಡೆಸುತ್ತಿದೆ. ಈ ಬಾರಿ ಸ್ಪರ್ಧೆಯಲ್ಲಿ ಹೊಸದಾಗಿ ಮೂರನೇ ಶಕ್ತಿಯಾಗಿ ತನ್ನನ್ನು ತಾನು ಗುರುತಿಸಿಕೊಂಡಿರುವ ಬಿಜೆಪಿ, ಇತರೆ ರಾಜ್ಯಗಳಂತೆ ಕೇರಳದಲ್ಲಿಯೂ ಕೋಮುದ್ವೇಷದ ಆಧಾರದಲ್ಲಿ ಪ್ರಚಾರವನ್ನು ನಡೆಸುತ್ತಿದೆ. ಆದರೆ ಕೇರಳ ಕೊಂಚ ಭಿನ್ನ. ಇಲ್ಲಿ ಕೋಮುದ್ವೇಷ ಅಷ್ಟೊಂದು ನಡೆಯದು. ಕ್ರೈಸ್ತ ಸಮುದಾಯದ ಓಲೈಕೆಯೂ ಬಿಜೆಪಿಗೆ ಮುಖ್ಯ. ಈ ವಿಚಾರದಲ್ಲಿ ಬಿಜೆಪಿ ಕೇರಳದಲ್ಲಿ ಚುನಾವಣೆಗೂ ಮುನ್ನ ಕೊಂಚ ಎಡವಿದೆ. ಹಲವು ವಿವಾದಗಳನ್ನು ಸೃಷ್ಟಿಸಿಕೊಂಡು ವಿವಾದಗಳ ಗೊಚ್ಚೆಯಲ್ಲಿ ಸಿಲುಕಿ ಒದ್ದಾಡುತ್ತಿದೆ. ಮತ ಬ್ಯಾಂಕ್‌ಗಾಗಿ ತೊಳಲಾಟ ನಡೆಸುತ್ತಿದೆ.

ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಗೆದ್ದು ತನ್ನ ಬಲ ಪ್ರದರ್ಶಿಸಿದ್ದೇವೆ ಎಂದುಕೊಂಡ ಬಿಜೆಪಿ ವಿಧಾನಸಭೆ ಚುನಾವಣೆ ವೇಳೆಗೆ ಕೊಂಚ ಅಧಿಕ ಪ್ರಮಾದ ಮಾಡಿಕೊಂಡಿದೆ. ಇವೆಲ್ಲವುದರನ್ನು ಸರಿದೂಗಿಸಲು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರು, ಕೇಂದ್ರ, ರಾಜ್ಯ ಮತ್ತು ಸ್ಥಳೀಯ ನಾಯಕರು ಪ್ರಚಾರಕ್ಕೆ ಇಳಿದಿದ್ದಾರೆ. ವಿವಾದಗಳನ್ನು ಮುಚ್ಚಿ ಹಾಕಲು ಒದ್ದಾಡುತ್ತಿದ್ದಾರೆ.

ಈ ಹಿಂದಿಗಿಂತ ಕೊಂಚ ಹೆಚ್ಚು ನಿರೀಕ್ಷೆಯೊಂದಿಗೆ 2026ರ ಕೇರಳ ವಿಧಾನಸಭೆ ಚುನಾವಣೆಯ ಕಣಕ್ಕೆ ಬಿಜೆಪಿ ಇಳಿದಿದೆ. ಪಕ್ಷದ ಸಾಂಪ್ರದಾಯಿಕ ಕ್ಷೇತ್ರಗಳಲ್ಲಿ ಮತ ಬ್ಯಾಂಕ್ ವಿಸ್ತರಿಸಲು, ಕೇರಳ ಕ್ರೈಸ್ತರ ಓಲೈಸಲು, ಹಿಂದೂ ಮತಗಳನ್ನು ಕ್ರೋಢೀಕರಿಸಲು ಯತ್ನಿಸುತ್ತಿದೆ. ಈವರೆಗೆ ಯುಡಿಎಫ್ ಬಿಟ್ಟರೆ ಎಲ್‌ಡಿಎಫ್, ಎಲ್‌ಡಿಎಫ್ ಬಿಟ್ಟರೆ ಯುಡಿಎಫ್ ಎಂದು ಬಿಂಬಿತವಾಗಿರುವ ರಾಜ್ಯದಲ್ಲಿ ತಾನು ಮೂರನೇ ಶಕ್ತಿ ಎಂದು ಕರೆಸಿಕೊಳ್ಳಲು ಸತತ ಯತ್ನ ನಡೆಸುತ್ತಿದೆ.

ನೇಮಮ್‌ನಲ್ಲಿ ರಾಜ್ಯ ಅಧ್ಯಕ್ಷ ರಾಜೀವ್ ಚಂದ್ರಶೇಖರ್ ಅವರನ್ನು ಕಣಕ್ಕಿಳಿಸುವುದು ಕೇವಲ ಚುನಾವಣಾ ತಂತ್ರವಾಗಿರಲಿಲ್ಲ. ಬಿಜೆಪಿ ಕೇರಳದ ವಿಚಾರದಲ್ಲಿ ಗಂಭಿರವಾಗಿದೆ ಎಂಬುದನ್ನು ಸೂಚಿಸುವ ಯತ್ನವಾಗಿತ್ತು. ಆದರೆ ಪ್ರಚಾರದ ಆರಂಭಿಕ ಹಂತದಲ್ಲೇ ಬಿಜೆಪಿ ದಿಕ್ಕು ತಪ್ಪಿತು. ಮೊದಲು ರಾಜೀವ್ ಚಂದ್ರಶೇಖರ್ ಅವರ ಅಫಿಡವಿಟ್ ವಿವಾದ ಆರಂಭವಾಯಿತು. ಬೆಂಗಳೂರಿನ ಕೋರಮಂಗಲದಲ್ಲಿರುವ ಬೆಲೆಬಾಳುವ ಆಸ್ತಿ ಮತ್ತು ಜುಪಿಟರ್ ಕ್ಯಾಪಿಟಲ್‌ನಂತಹ ದೊಡ್ಡ ಕಂಪನಿಗಳಲ್ಲಿನ ಹೂಡಿಕೆಯನ್ನು ರಾಜೀವ್ ಮರೆಮಾಚಿರುವುದು ತೀವ್ರ ವಿವಾದಕ್ಕೆ ಕಾರಣವಾಯಿತು. ಅಷ್ಟು ಮಾತ್ರವಲ್ಲದೆ ರಾಜೀವ್ ಬಳಿ ಯಾವುದೇ ಕಾರು ಇಲ್ಲ, ಕೇವಲ 1942ರ ಮಾಡೆಲ್‌ನ ಒಂದು ಹಳೆಯ ಬೈಕ್ (ಇಂಡಿಯನ್ ಸ್ಕೌಟ್) ಮಾತ್ರ ಇದೆ ಎಂದು ಉಲ್ಲೇಖಿಸಿರುವುದು ಬಿಜೆಪಿಯನ್ನು ಇಕ್ಕಟ್ಟಿಗೆ ಸಿಲುಕಿಸಿತು.

ಆದರೆ ಇದಕ್ಕೆ ದಾಖಲೆ ಸಹಿತ ಸ್ಪಷ್ಟನೆ ನೀಡಲಾಗದ ರಾಜೀವ್, ''ಇದು ಆಧಾರರಹಿತ ಆರೋಪ. ಸಂಪೂರ್ಣವಾಗಿ ಕಟ್ಟುಕಥೆ. ಕಾನೂನಿನಲ್ಲಿ ಅಗತ್ಯವಿರುವ ಪ್ರತಿಯೊಂದು ವಿವರವನ್ನು ಬಹಿರಂಗಪಡಿಸಲಾಗಿದೆ. ಇದು ಮತದಾರರ ಗಮನವನ್ನು ಬೇರೆಡೆ ಸೆಳೆಯುವ ಹತಾಶ ಪ್ರಯತ್ನವಲ್ಲದೆ ಬೇರೇನೂ ಅಲ್ಲ'' ಎಂದು ಹೇಳಿಕೊಂಡಿದ್ದಾರೆ. ಆದರೂ ಈ ಪ್ರಸಂಗ ಹಾಗೆಯೇ ಉಳಿದಿದೆ. ಈ ಅಫಿಡವಿಟ್ ಅನ್ನು ಮುಂದಿಟ್ಟುಕೊಂಡೆ ಯುಡಿಎಫ್, ಎಲ್‌ಡಿಎಫ್ ಬಿಜೆಪಿ ವಿರುದ್ಧ ಪ್ರಚಾರ ನಡೆಸುತ್ತಿದೆ. ಈ ವಿವಾದ ಮರೆಯಾಗುವುದಕ್ಕೂ ಮುನ್ನವೇ ಗುರುವಾಯೂರಿನಲ್ಲಿ ಮತ್ತೊಂದು ವಿವಾದವನ್ನು ಬಿಜೆಪಿ ಸೃಷ್ಟಿಸಿತು.

ಕೋಮುದ್ವೇಷ ಹೇಳಿಕೆ ವಿವಾದ

ದಶಕಗಳಿಂದ ಕ್ಷೇತ್ರದಲ್ಲಿ ಹಿಂದೂ ಶಾಸಕ ಇಲ್ಲ ಎಂಬ ಬಿಜೆಪಿ ನಾಯಕ ಮತ್ತು ಗುರುವಾಯೂರು ಕ್ಷೇತ್ರದ ಅಭ್ಯರ್ಥಿ ಬಿ. ಗೋಪಾಲಕೃಷ್ಣನ್ ಅವರ ಹೇಳಿಕೆ ಕೋಮು ಸೌಹಾರ್ದ ನೆಲೆಯಾದ ಕೇರಳದಲ್ಲಿ ಕೊಂಚ ತಾಪತ್ರಯ ಸೃಷ್ಟಿಸಿತು. ದೂರುಗಳು ದಾಖಲಾದವು. ಈ ಪ್ರಕರಣವು ಕೇರಳ ಹೈಕೋರ್ಟ್ ಮೆಟ್ಟಿಲೇರಿತು. ಚುನಾವಣಾ ಆಯೋಗ ಮಧ್ಯಪ್ರವೇಶಿಸಿತು. ಆದರೆ ಗೋಪಾಲಕೃಷ್ಣನ್ ತಮ್ಮ ನಿಲುವು ಬದಲಾಯಿಸಿಲ್ಲ. ದೂರುಗಳು ದಾಖಲಾದರೂ ಮತ್ತೆ ಅದೇ ಹೇಳಿಕೆಯನ್ನು ಪುನರುಚ್ಚರಿಸಿದ್ದಾರೆ. ಬಿಜೆಪಿಯಲ್ಲಿಯೇ ಗೋಪಾಲಕೃಷ್ಣನ್ ಹೇಳಿಕೆಯ ಬಗ್ಗೆ ಅಸಮಾಧಾನವಿದೆ.

ವಿದೇಶಿ ದೇಣಿಗೆ ತಿದ್ದುಪಡಿ ಮಸೂದೆ ಸುತ್ತ

ಬಹುಶಃ ಕೇರಳದಲ್ಲಿ ಬಿಜೆಪಿ ನೆಲೆಯೂರುವ ಕನಸಿಗೆ ಅಧಿಕ ಕುತ್ತು ತಂದಿದ್ದು ವಿದೇಶಿ ದೇಣಿಗೆ ತಿದ್ದುಪಡಿ ಮಸೂದೆ ಅಂದರೆ . ಕೇರಳದಲ್ಲಿ ಬಿಜೆಪಿ ಮೂರನೇ ಪ್ರಬಲ ಶಕ್ತಿಯಾಗಿ ಹೊರಹೊಮ್ಮಬೇಕಾದರೆ ಕ್ರೈಸ್ತರ ಬೆಂಬಲ ಅಗತ್ಯ. ಆದರೆ ಈ ಎಫ್‌ಸಿಆರ್‌ಎ ತಿದ್ದುಪಡಿಯು ಕೇರಳದಲ್ಲಿ ಕ್ರೈಸ್ತ ಸಮುದಾಯದಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಕೇಂದ್ರ ಸರ್ಕಾರವು ಈ ಮಸೂದೆ ಮೂಲಕ ಅಲ್ಪಸಂಖ್ಯಾತ, ಅದರಲ್ಲೂ ಕ್ರೈಸ್ತ ಸಮುದಾಯ ನಡೆಸುತ್ತಿರುವ ಅನಾಥಾಶ್ರಮಗಳು, ಶಿಕ್ಷಣ ಸಂಸ್ಥೆಗಳು ಮತ್ತು ಆಸ್ಪತ್ರೆಗಳನ್ನು ಗುರಿಯಾಗಿಸಿದೆ ಎಂಬ ಆರೋಪ ಸದ್ಯ ಕೇಳಿಬರುತ್ತಿದೆ. ಕಾಂಜಿರಪ್ಪಳ್ಳಿಯಿಂದ ಸ್ಪರ್ಧಿಸುತ್ತಿರುವ ಕೇಂದ್ರ ಸಚಿವ ಜಾರ್ಜ್ ಕುರಿಯನ್ ಮತದಾರರ ಮನವೊಲಿಸಲು ಪ್ರಯತ್ನಿಸಿದರೂ ಅದು ಸಫಲವಾಗಿಲ್ಲ. ಸಿರೋ-ಮಲಬಾರ್ ಚರ್ಚ್ ಮತ್ತು ಮಲಂಕರ ಆರ್ಥೊಡಾಕ್ಸ್ ಸಿರಿಯನ್ ಚರ್ಚ್‌ನಂತಹ ಪ್ರಬಲ ಧಾರ್ಮಿಕ ಸಂಸ್ಥೆಗಳ ಬಿಷಪ್‌ಗಳು ಈ ಮಸೂದೆಯನ್ನು ಬಹಿರಂಗವಾಗಿ ಟೀಕಿಸಿದ್ದಾರೆ.

ಸ್ಥಳೀಯವಾಗಿಯೂ ಬಿಜೆಪಿಗಿದೆ ಬಿಕ್ಕಟ್ಟು

ಬಿಜೆಪಿ ನಾಯಕರ ಹೇಳಿಕೆಗಳು, ದಾಖಲೆಗಳು ಸ್ಥಳೀಯವಾಗಿಯೂ ಬಿಜೆಪಿಯನ್ನು ಬಿಕ್ಕಟ್ಟಿನಲ್ಲಿ ಸಿಲುಕಿಸಿದೆ. ವಡಕಂತರದಲ್ಲಿ ಪ್ರಚಾರ ಮಾಡುವಾಗ ಕಾಂಗ್ರೆಸ್ ಅಭ್ಯರ್ಥಿ ರಮೇಶ್ ಪಿಶಾರೋಡಿ ಅವರನ್ನು ತಡೆದ ಘಟನೆಯು ಪೊಲೀಸ್ ಠಾಣೆ ಮೆಟ್ಟಿಲೇರಿದೆ. ಬಿಜೆಪಿ ಕೌನ್ಸಿಲರ್ ಸಿಂಧು ರಾಜನ್ ಮತ್ತು ಇತರರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಚುನಾವಣಾ ಪ್ರಕ್ರಿಯೆಯಲ್ಲಿ ಅಡ್ಡಿಪಡಿಸಿದ ಆರೋಪ ಹೊರಿಸಲಾಗಿದೆ. ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಈ ವಿಚಾರದಲ್ಲಿ ಹೇಳಿಕೆಗಳನ್ನು ನೀಡಿದ್ದಾರೆ. ''ಅಭ್ಯರ್ಥಿಯನ್ನು ಪ್ರಚಾರ ಮಾಡದಂತೆ ತಡೆಯುವುದು ರಾಜಕೀಯವಲ್ಲ. ಇದು ಪ್ರಜಾಪ್ರಭುತ್ವ ಹಕ್ಕುಗಳ ಉಲ್ಲಂಘನೆ'' ಎಂದು ಸಾರ್ವಜನಿಕ ಸಭೆಯಲ್ಲಿ ಹೇಳಿದರು.

ಬಿಜೆಪಿ ಎಲ್ಲ ವಿವಾದಗಳನ್ನು ನಿಯಂತ್ರಿಸಬಹುದಿತ್ತು. ಆದರೆ ನಿಯಂತ್ರಿಸುವಲ್ಲಿ ಎಡವಿದ್ದು ಈಗ ಬಿಜೆಪಿಯ ಉದ್ದೇಶವನ್ನೇ ಬುಡಮೇಲು ಮಾಡುವಂತಿದೆ. ಅಷ್ಟಕ್ಕೂ ಬಿಜೆಪಿಗೆ ಕೇರಳದ ಎಲ್‌ಡಿಎಫ್ ಸರ್ಕಾರದ ವಿರುದ್ಧ ಪ್ರಚಾರಕ್ಕೆ ಹೆಚ್ಚು ವಿಷಯವಸ್ತುಗಳಿಲ್ಲ. ಯುಡಿಎಫ್ ವಿರುದ್ಧವೂ ಅದೇ ಸಂಗತಿ. ಹೀಗಿರುವಾಗ ತನ್ನ ವಿವಾದವನ್ನು ಮುಚ್ಚಿಹಾಕುವುದರಲ್ಲೇ ಬಿಜೆಪಿ ಸಮಯ ಕಳೆದುಹೋಗುತ್ತಿದೆ. ಬಿಜೆಪಿ ತನ್ನ ವಿರೋಧಿಗಳೊಂದಿಗೆ ಹೋರಾಡುತ್ತಿದೆಯೇ ಅಥವಾ ತನ್ನದೇ ಆದ ತಪ್ಪು ಹೆಜ್ಜೆಗಳ ವಿರುದ್ಧ ಹೋರಾಡುತ್ತಿದೆಯೇ ಎಂಬುದು ಪ್ರಶ್ನೆಯಾಗಿಯೇ ಉಳಿದಿದೆ.

ದಕ್ಷಿಣದ ಧ್ವನಿ ಅಡಗಿಸುವ ಹುನ್ನಾರ: ಕೇಂದ್ರದ ವಿರುದ್ಧ ಸಿಡಿದೆದ್ದ ಸಿದ್ದರಾಮಯ್ಯ, ಪಿಣರಾಯಿ

ಸಂವಿಧಾನದ ಆಶಯಗಳನ್ನು ಹಾಗೂ ಒಕ್ಕೂಟ ವ್ಯವಸ್ಥೆಯ ಸಮತೋಲನವನ್ನು ಕಾಪಾಡಲು 1971ರ ಜನಗಣತಿಯ ಆಧಾರದಲ್ಲೇ ಯಥಾಸ್ಥಿತಿ ಮುಂದುವರಿಸಬೇಕು ಎಂಬುದು ದಕ್ಷಿಣದ ನಾಯಕರ ಒಕ್ಕೊರಲಿನ ಆಗ್ರಹವಾಗಿದೆ. ದಕ್ಷಿಣದ ರಾಜ್ಯಗಳು ಒಗ್ಗೂಡಿ ಕೇಂದ್ರದ ವಿರುದ್ಧ ಜಂಟಿ ಕ್ರಿಯಾಯೋಜನೆ ರೂಪಿಸುವ ಚಿಂತನೆಯಲ್ಲಿದ್ದು, ಸಂಸದೀಯ ಪ್ರಾತಿನಿಧ್ಯದ ಈ ವಿವಾದ ಮುಂದಿನ ದಿನಗಳಲ್ಲಿ ಮತ್ತಷ್ಟು ಕಾವು ಪಡೆದುಕೊಳ್ಳಲಿದೆ



ಬಹುನಿರೀಕ್ಷಿತ ಲೋಕಸಭಾ ಕ್ಷೇತ್ರಗಳ ಮರುವಿಂಗಡಣೆ ಪ್ರಕ್ರಿಯೆಯು ಇದೀಗ ಕೇಂದ್ರ ಸರ್ಕಾರ ಮತ್ತು ದಕ್ಷಿಣ ಭಾರತದ ರಾಜ್ಯಗಳ ನಡುವಿನ ತೀವ್ರ ರಾಜಕೀಯ ಸಂಘರ್ಷಕ್ಕೆ ವೇದಿಕೆಯಾಗಿದೆ. ದಕ್ಷಿಣ ರಾಜ್ಯಗಳ ಪ್ರಾತಿನಿಧ್ಯಕ್ಕೆ ಕುತ್ತು ಬರುವ ಭೀತಿಯ ಹಿನ್ನೆಲೆಯಲ್ಲಿ, ಮರುವಿಂಗಡಣೆ ಪ್ರಕ್ರಿಯೆಯಿಂದ ದಕ್ಷಿಣದ ರಾಜ್ಯಗಳ ಲೋಕಸಭಾ ಸೀಟುಗಳು ಕಡಿಮೆಯಾಗುವುದಿಲ್ಲ ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಭರವಸೆಯನ್ನು ದಕ್ಷಿಣದ ರಾಜ್ಯಗಳ ನಾಯಕರು ಸಾರಾಸಗಟಾಗಿ ತಿರಸ್ಕರಿಸಿದ್ದಾರೆ. ಇದು ಕೇವಲ ರಾಜಕೀಯ ತಂತ್ರಗಾರಿಕೆ, ಇದರ ಹಿಂದೆ ದಕ್ಷಿಣದ ರಾಜ್ಯಗಳ ರಾಜಕೀಯ ಅಸ್ತಿತ್ವವನ್ನು ಕುಗ್ಗಿಸುವ ಹುನ್ನಾರವಿದೆ ಎಂದು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಕಟುವಾಗಿ ಟೀಕಿಸಿದ್ದಾರೆ.

ಕ್ಷೇತ್ರ ಮರುವಿಂಗಡಣೆ ಕುರಿತ ಕೇಂದ್ರದ ನಿಲುವನ್ನು ತೀವ್ರವಾಗಿ ಖಂಡಿಸಿರುವ ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಪ್ರಧಾನಿ ಮಾತಿನಲ್ಲಿ ದಕ್ಷಿಣ ಭಾರತವನ್ನು ವಂಚಿಸುವ ತಂತ್ರ ಅಡಗಿದೆ ಎಂದು ನೇರ ಆರೋಪ ಮಾಡಿದ್ದಾರೆ. ದೇಶದ ಎಲ್ಲಾ ರಾಜ್ಯಗಳ ಜನಸಂಖ್ಯಾ ಬೆಳವಣಿಗೆಯ ಪ್ರಮಾಣವು ಒಂದು ನಿರ್ದಿಷ್ಟ ಹಂತಕ್ಕೆ ಬಂದು ಸ್ಥಿರಗೊಳ್ಳುವ ತನಕ 1971ರ ಜನಗಣತಿಯೇ ಕ್ಷೇತ್ರ ಮರುವಿಂಗಡಣೆಗೆ ಮೂಲ ಆಧಾರವಾಗಿರಬೇಕು. ಆಗಷ್ಟೇ ಲೋಕಸಭೆಯಲ್ಲಿ ಎಲ್ಲಾ ರಾಜ್ಯಗಳ ರಾಜಕೀಯ ತೂಕ ಸಮನಾಗಿರಲು ಸಾಧ್ಯವಾಗುತ್ತದೆ. ಕೇವಲ ಪ್ರಸ್ತುತ ಬೆಳೆಯುತ್ತಿರುವ ಜನಸಂಖ್ಯೆಯನ್ನು ಮಾತ್ರ ಏಕೈಕ ಮಾನದಂಡವಾಗಿ ಇಟ್ಟುಕೊಂಡರೆ, ಜನಸಂಖ್ಯಾ ನಿಯಂತ್ರಣದಲ್ಲಿ ಯಶಸ್ವಿಯಾಗಿರುವ ದಕ್ಷಿಣದ ರಾಜ್ಯಗಳು ತಮ್ಮ ರಾಜಕೀಯ ಪ್ರಾತಿನಿಧ್ಯವನ್ನು ಕಳೆದುಕೊಳ್ಳಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.

ಇದೇ ವಿಚಾರವಾಗಿ ಪ್ರಧಾನಿ ಮೋದಿಯವರ ಹೇಳಿಕೆಗೆ ತಿರುಗೇಟು ನೀಡಿರುವ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸರ್ಕಾರದ ನಡೆಯನ್ನು ಕಟುವಾಗಿ ಟೀಕಿಸಿದ್ದು, ಕನ್ನಡಿಗರ ಧ್ವನಿ ಅಡಗಿಸುವ ಯತ್ನ ಇದಾಗಿದೆ ಎಂದಿದ್ದಾರೆ. ಮರುವಿಂಗಡಣೆ ವೇಳೆ ದಕ್ಷಿಣದ ಸೀಟು ತಗ್ಗುವುದಿಲ್ಲ ಎಂಬ ಮೋದಿಯವರ ಹೇಳಿಕೆಯು ಕೇವಲ ಕಣ್ಕಟ್ಟು ಮತ್ತು ಚುನಾವಣಾ ತಂತ್ರಗಾರಿಕೆಯಾಗಿದೆ. ಕೇಂದ್ರದ ಈ ನಡೆಯು ಕನ್ನಡಿಗರ ಮತ್ತು ಪ್ರಗತಿಪರ ದಕ್ಷಿಣದ ರಾಜ್ಯಗಳ ಧ್ವನಿಯನ್ನು ಸಂಸತ್ತಿನಲ್ಲಿ ಅಡಗಿಸುವ ವ್ಯವಸ್ಥಿತ ಪ್ರಯತ್ನವಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಜನಸಂಖ್ಯಾ ನಿಯಂತ್ರಣ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ತಾವು ಸಾಧಿಸಿದ ಯಶಸ್ಸೇ ತಮಗೆ ನೀಡುತ್ತಿರುವ ಶಿಕ್ಷೆಯಾಗಬಾರದು. ಶಿಕ್ಷಣ, ಆರೋಗ್ಯ ಮತ್ತು ಜನಸಂಖ್ಯೆ ನಿಯಂತ್ರಣದಲ್ಲಿ ವಿಫಲವಾಗಿರುವ ಉತ್ತರಪ್ರದೇಶ, ಬಿಹಾರದಂತಹ ರಾಜ್ಯಗಳಿಗೆ ಸಂಸತ್ತಿನಲ್ಲಿ ಹೆಚ್ಚಿನ ಸೀಟುಗಳನ್ನು ನೀಡಿ, ರಾಷ್ಟ್ರೀಯ ಆರ್ಥಿಕತೆ ಹಾಗೂ ತೆರಿಗೆ ಸಂಗ್ರಹಕ್ಕೆ ಅತಿ ದೊಡ್ಡ ಕೊಡುಗೆ ನೀಡುತ್ತಿರುವ ದಕ್ಷಿಣದ ರಾಜ್ಯಗಳಿಗೆ ರಾಜಕೀಯ ಹಿನ್ನಡೆ ಉಂಟುಮಾಡುವುದು ದೇಶದ ಒಕ್ಕೂಟ ವ್ಯವಸ್ಥೆಗೆ ಎಸಗುವ ದ್ರೋಹ ಎಂದು ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬೆಳವಣಿಗೆಗಳ ಹಿಂದಿರುವ ಅಂಕಿಅಂಶಗಳ ಆತಂಕವನ್ನು ಗಮನಿಸುವುದಾದರೆ, ಭಾರತದಲ್ಲಿ ಕೊನೆಯ ಬಾರಿಗೆ 1971ರ ಜನಗಣತಿ ಆಧಾರದ ಮೇಲೆ ಲೋಕಸಭಾ ಕ್ಷೇತ್ರಗಳ ಹಂಚಿಕೆ ಮಾಡಲಾಗಿತ್ತು. ಆ ಬಳಿಕ ಜನಸಂಖ್ಯಾ ನಿಯಂತ್ರಣ ನೀತಿಗಳನ್ನು ಕಟ್ಟುನಿಟ್ಟಾಗಿ ಅಳವಡಿಸಿಕೊಂಡ ದಕ್ಷಿಣದ ರಾಜ್ಯಗಳಿಗೆ ಅನ್ಯಾಯವಾಗಬಾರದು ಎಂಬ ಕಾರಣಕ್ಕೆ 2026ರವರೆಗೆ ಕ್ಷೇತ್ರಗಳ ಸಂಖ್ಯೆಯನ್ನು ಸ್ಥಗಿತಗೊಳಿಸಲಾಗಿತ್ತು.

ಪ್ರಸ್ತುತ ಅಂದಾಜಿನ ಪ್ರಕಾರ, ಹೊಸ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಮರುವಿಂಗಡಣೆ ನಡೆದರೆ, ಹಿಂದಿ ಭಾಷಿಕ ಉತ್ತರದ ರಾಜ್ಯಗಳು ಗಣನೀಯವಾಗಿ ಹೆಚ್ಚಿನ ಹೊಸ ಸ್ಥಾನಗಳನ್ನು ಪಡೆಯುವ ಸಾಧ್ಯತೆಯಿದೆ. ಅದೇ ವೇಳೆ, ಕರ್ನಾಟಕ, ಕೇರಳ, ತಮಿಳುನಾಡು ರಾಜ್ಯಗಳ ಸಂಸದೀಯ ಬಲವು ಒಟ್ಟಾರೆ ಸೀಟುಗಳ ಅನುಪಾತದಲ್ಲಿ ತೀವ್ರವಾಗಿ ಕುಸಿಯುವ ಭೀತಿಯಿದೆ.

ರಾಜಕೀಯ ಪ್ರಾತಿನಿಧ್ಯದ ಈ ನಷ್ಟವು ಕೇವಲ ಲೋಕಸಭಾ ಸೀಟುಗಳ ಸಂಖ್ಯೆಗೆ ಸೀಮಿತವಾಗಿರದೆ, ರಾಷ್ಟ್ರಪತಿ ಚುನಾವಣೆ, ಸಂವಿಧಾನ ತಿದ್ದುಪಡಿಗಳಂತಹ ನಿರ್ಣಾಯಕ ಪ್ರಕ್ರಿಯೆಗಳಲ್ಲೂ ದಕ್ಷಿಣ ಭಾರತದ ರಾಜ್ಯಗಳ ಧ್ವನಿಯನ್ನು ದುರ್ಬಲಗೊಳಿಸಲಿದೆ ಎಂದು ತಜ್ಞರು ವಿಶ್ಲೇಷಿಸಿದ್ದಾರೆ. ಈ ಹಿನ್ನೆಲೆಯಲ್ಲಿ, ಸಂವಿಧಾನದ ಆಶಯಗಳನ್ನು ಹಾಗೂ ಒಕ್ಕೂಟ ವ್ಯವಸ್ಥೆಯ ಸಮತೋಲನವನ್ನು ಕಾಪಾಡಲು 1971ರ ಜನಗಣತಿಯ ಆಧಾರದಲ್ಲೇ ಯಥಾಸ್ಥಿತಿ ಮುಂದುವರಿಸಬೇಕು ಎಂಬುದು ದಕ್ಷಿಣದ ನಾಯಕರ ಒಕ್ಕೊರಲಿನ ಆಗ್ರಹವಾಗಿದೆ. ದಕ್ಷಿಣದ ರಾಜ್ಯಗಳು ಒಗ್ಗೂಡಿ ಕೇಂದ್ರದ ವಿರುದ್ಧ ಜಂಟಿ ಕ್ರಿಯಾಯೋಜನೆ ರೂಪಿಸುವ ಚಿಂತನೆಯಲ್ಲಿದ್ದು, ಸಂಸದೀಯ ಪ್ರಾತಿನಿಧ್ಯದ ಈ ವಿವಾದ ಮುಂದಿನ ದಿನಗಳಲ್ಲಿ ಮತ್ತಷ್ಟು ಕಾವು ಪಡೆದುಕೊಳ್ಳಲಿದೆ.

ರಷ್ಯಾ ಸಹಕಾರ: ಭಾರತದ ಇಂಧನದ ಕೊರತೆ ಎಷ್ಟರ ಮಟ್ಟಿಗೆ ನೀಗಲಿದೆ?



ರಷ್ಯಾದ ಈ ನಿರಂತರ ಮತ್ತು ರಿಯಾಯಿತಿ ದರದ ಪೂರೈಕೆಯು ಭಾರತದ ಬೃಹತ್ ಇಂಧನ ಕೊರತೆಯನ್ನು ಗಣನೀಯವಾಗಿ ನೀಗಿಸುವ ಜೊತೆಗೆ, ದೇಶದ ಹಣದುಬ್ಬರ ನಿಯಂತ್ರಣಕ್ಕೂ ಅತಿ ದೊಡ್ಡ ಮಟ್ಟದಲ್ಲಿ ನೆರವಾಗಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ 90 ರಿಂದ 100 ಡಾಲರ್ ಗಡಿ ದಾಟಿ ವಿಪರೀತವಾಗಿ ಏರಿಳಿತಗೊಂಡರೂ, ರಷ್ಯಾದ ಅಗ್ಗದ ತೈಲವು ಭಾರತದೊಳಗೆ ರಿಟೇಲ್ ಇಂಧನ ಬೆಲೆಗಳು ಗಗನಕ್ಕೇರದಂತೆ ತಡೆದಿದೆ.

ಜಾಗತಿಕ ಮಟ್ಟದಲ್ಲಿ ದಿನೇ ದಿನೇ ತೀವ್ರಗೊಳ್ಳುತ್ತಿರುವ ಭೌಗೋಳಿಕ-ರಾಜಕೀಯ ಬಿಕ್ಕಟ್ಟುಗಳು, ಯುದ್ಧದ ಕಾರ್ಮೋಡಗಳು ಮತ್ತು ಇಂಧನ ಮಾರುಕಟ್ಟೆಯ ತೀವ್ರ ಅನಿಶ್ಚಿತತೆಯ ನಡುವೆ ಭಾರತಕ್ಕೆ ಬಹುದೊಡ್ಡ ಆರ್ಥಿಕ ನೆಮ್ಮದಿ ದೊರಕಿದೆ. ಅಮೆರಿಕ ಮತ್ತು ಯುರೋಪಿಯನ್ ಯೂನಿಯನ್ ಸೇರಿದಂತೆ ಪಾಶ್ಚಿಮಾತ್ಯ ದೇಶಗಳು ಹೇರಿರುವ ಅತ್ಯಂತ ಕಠಿಣ ಆರ್ಥಿಕ ನಿರ್ಬಂಧಗಳ ನಡುವೆಯೂ, ಭಾರತಕ್ಕೆ ನಿರಂತರವಾಗಿ ಕಚ್ಚಾ ತೈಲ ಮತ್ತು ದ್ರವೀಕೃತ ನೈಸರ್ಗಿಕ ಅನಿಲವನ್ನು (ಎಲ್‌ಎನ್‌ಜಿ) ಭಾರಿ ರಿಯಾಯಿತಿ ದರದಲ್ಲಿ ಪೂರೈಸಲು ರಷ್ಯಾ ಸಮ್ಮತಿ ಸೂಚಿಸಿದೆ. ಉಕ್ರೇನ್ ಸಂಘರ್ಷದ ಬಳಿಕ ಸಂಪೂರ್ಣವಾಗಿ ಬದಲಾದ ಜಾಗತಿಕ ರಾಜತಾಂತ್ರಿಕ ಮತ್ತು ಆರ್ಥಿಕ ಸಮೀಕರಣಗಳಲ್ಲಿ, ರಷ್ಯಾದ ಈ ನಿರ್ಧಾರವು ಭಾರತದ ಪಾಲಿಗೆ ಒಂದು ಆರ್ಥಿಕ ಸಂಜೀವಿನಿಯಾಗಿ ಪರಿಣಮಿಸಿದೆ ಎಂದರೆ ಅತಿಶಯೋಕ್ತಿಯಲ್ಲ.

ಭಾರತವು ವಿಶ್ವದ ಮೂರನೇ ಅತಿದೊಡ್ಡ ಇಂಧನ ಬಳಕೆದಾರ ಮತ್ತು ಆಮದುದಾರ ರಾಷ್ಟ್ರವಾಗಿದೆ. ದೇಶದ ಒಟ್ಟು ತೈಲ ಬೇಡಿಕೆಯ ಶೇಕಡಾ 85ರಷ್ಟನ್ನು ಹಾಗೂ ನೈಸರ್ಗಿಕ ಅನಿಲದ ಬೇಡಿಕೆಯ ಶೇಕಡಾ 50ರಷ್ಟನ್ನು ಕೇವಲ ಆಮದು ಮೂಲಕವೇ ಪೂರೈಸಿಕೊಳ್ಳಲಾಗುತ್ತಿದೆ. 2022ರ ಫೆಬ್ರವರಿಯಲ್ಲಿ ಶುರುವಾದ ರಷ್ಯಾ-ಉಕ್ರೇನ್ ಯುದ್ಧಕ್ಕೂ ಮುನ್ನ, ಭಾರತದ ಒಟ್ಟು ತೈಲ ಆಮದಿನಲ್ಲಿ ರಷ್ಯಾದ ಪಾಲು ಕೇವಲ ಶೇಕಡಾ 1 ರಿಂದ 2ರಷ್ಟು ಮಾತ್ರ ಇತ್ತು. ಆಗ ನಮ್ಮ ಬಹುಪಾಲು ಇಂಧನ ಅಗತ್ಯಗಳಿಗಾಗಿ ನಾವು ಮಧ್ಯಪ್ರಾಚ್ಯದ ಒಪೆಕ್ ದೇಶಗಳಾದ ಸೌದಿ ಅರೇಬಿಯಾ, ಇರಾಕ್ ಮತ್ತು ಯುಎಇ ಮೇಲೆ ಅತಿಯಾಗಿ ಅವಲಂಬಿತರಾಗಿದ್ದೆವು.

ಈ ಹಂತದಲ್ಲಿ ಅಮೆರಿಕದ ವಿದೇಶಾಂಗ ನೀತಿಗಳು ಮತ್ತು ನಿರ್ಬಂಧಗಳ ಇತಿಹಾಸವನ್ನು ನಾವು ಸೂಕ್ಷ್ಮವಾಗಿ ಗಮನಿಸಬೇಕಾಗುತ್ತದೆ. ಈ ಹಿಂದೆ ಭಾರತಕ್ಕೆ ಅತಿ ಹೆಚ್ಚು ತೈಲ ಪೂರೈಸುತ್ತಿದ್ದ ಇರಾನ್ ಮತ್ತು ದಕ್ಷಿಣ ಅಮೆರಿಕದ ಪ್ರಮುಖ ತೈಲ ಉತ್ಪಾದಕ ರಾಷ್ಟ್ರವಾದ ವೆನೆಜುವೆಲಾದ ಮೇಲೆ ಅಮೆರಿಕ ಕಠಿಣ ನಿರ್ಬಂಧಗಳನ್ನು ಹೇರಿದಾಗ, ಭಾರತದ ಇಂಧನ ಭದ್ರತೆಗೆ ದೊಡ್ಡ ಹೊಡೆತ ಬಿದ್ದಿತ್ತು. ಅಗ್ಗದ ತೈಲದ ಮೂಲಗಳು ಕೈತಪ್ಪಿದ್ದರಿಂದ ಪರ್ಯಾಯ ಮಾರುಕಟ್ಟೆಗಳನ್ನು ಹುಡುಕುವುದು ಭಾರತಕ್ಕೆ ಅನಿವಾರ್ಯವಾಗಿತ್ತು. ಹೀಗಾಗಿ, ಉಕ್ರೇನ್ ಯುದ್ಧದ ನಂತರ ಪಾಶ್ಚಿಮಾತ್ಯ ರಾಷ್ಟ್ರಗಳು ರಷ್ಯಾದ ತೈಲದ ಮೇಲೆ ಕಠಿಣ ನಿರ್ಬಂಧ ಹೇರಿದಾಗ, ರಷ್ಯಾ ತಾನೇ ಖುದ್ದಾಗಿ ಭಾರಿ ರಿಯಾಯಿತಿ ದರದಲ್ಲಿ ತೈಲ ನೀಡಲು ಮುಂದಾಯಿತು. ಈ ಅವಕಾಶವನ್ನು ಭಾರತ ತನ್ನ ರಾಷ್ಟ್ರೀಯ ಹಿತಾಸಕ್ತಿಯಿಂದ ಬಳಸಿಕೊಂಡಿತು.

ರಷ್ಯಾ ನೀಡಿದ ಈ ಬಂಪರ್ ಆಫರ್ ಅನ್ನು ತಕ್ಷಣವೇ ಸದುಪಯೋಗಪಡಿಸಿಕೊಂಡ ಭಾರತ, ತನ್ನ ಆರ್ಥಿಕ ಹಿತದೃಷ್ಟಿಯಿಂದ ರಷ್ಯಾದಿಂದ ಮಾಡುವ ಆಮದಿನ ಪ್ರಮಾಣವನ್ನು ದಿಢೀರ್ ಎಂದು ಹತ್ತು-ಹದಿನೈದು ಪಟ್ಟು ಹೆಚ್ಚಿಸಿತು. ಇದರ ಪರಿಣಾಮವಾಗಿ, ಪ್ರಸ್ತುತ ಭಾರತದ ಒಟ್ಟು ಕಚ್ಚಾ ತೈಲ ಆಮದಿನಲ್ಲಿ ರಷ್ಯಾದ ಪಾಲು ಸರಿಸುಮಾರು ಶೇಕಡಾ 35 ರಿಂದ 40ರಷ್ಟಕ್ಕೆ ತಲುಪಿದೆ. ಇತ್ತೀಚಿನ ವಾಣಿಜ್ಯ ಅಂಕಿ-ಅಂಶಗಳ ಪ್ರಕಾರ, ರಷ್ಯಾವು ನಮ್ಮ ದೀರ್ಘಕಾಲದ ಮತ್ತು ಸಾಂಪ್ರದಾಯಿಕ ಪ್ರಮುಖ ಪೂರೈಕೆದಾರರಾದ ಇರಾಕ್ ಮತ್ತು ಸೌದಿ ಅರೇಬಿಯಾವನ್ನು ಬಹುಹಿಂದೆ ಹಾಕಿ, ಭಾರತಕ್ಕೆ ಅತಿ ಹೆಚ್ಚು ಕಚ್ಚಾ ತೈಲ ಪೂರೈಸುವ ನಂಬರ್ ಒನ್ ರಾಷ್ಟ್ರವಾಗಿ ದೃಢವಾಗಿ ಹೊರಹೊಮ್ಮಿದೆ. ಇದು ಜಾಗತಿಕ ತೈಲ ಮಾರುಕಟ್ಟೆಯಲ್ಲಿಯೇ ಒಂದು ಐತಿಹಾಸಿಕ ಪಲ್ಲಟವಾಗಿದೆ.

ಕೇವಲ ಕಚ್ಚಾ ತೈಲ ಮಾತ್ರವಲ್ಲದೆ, ದ್ರವೀಕೃತ ನೈಸರ್ಗಿಕ ಅನಿಲ () ಪೂರೈಕೆಯಲ್ಲೂ ರಷ್ಯಾ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದೆ. ಭಾರತದ ಸರ್ಕಾರಿ ಸ್ವಾಮ್ಯದ ಅನಿಲ ನಿಗಮವಾದ ಗೇಲ್ () ಮತ್ತು ರಷ್ಯಾದ ದೈತ್ಯ ಇಂಧನ ಕಂಪನಿ ಗ್ಯಾಜ್‌ಪ್ರೋಮ್ ನಡುವಿನ ದೀರ್ಘಾವಧಿಯ ಒಪ್ಪಂದದ ಅನ್ವಯ, ವಾರ್ಷಿಕ ಎಲ್.ಎನ್.ಜಿ ಪೂರೈಕೆಗೆ ರಷ್ಯಾ ತನ್ನ ಬದ್ಧತೆ ತೋರಿದೆ. ಅಮೆರಿಕದ ಡಾಲರ್ ಮತ್ತು ಸ್ವಿಫ್ಟ್ () ಪಾವತಿ ವ್ಯವಸ್ಥೆಗಳ ನಿರ್ಬಂಧದಿಂದಾಗಿ ಆರಂಭದಲ್ಲಿ ಸಾಗಾಟ ಮತ್ತು ಹಣ ಪಾವತಿಯಲ್ಲಿ ತೊಡಕುಗಳಾದವು. ಆದರೆ, ಇದೀಗ ಉಭಯ ದೇಶಗಳು ರೂಪಾಯಿ-ರೂಬಲ್ ಹಾಗೂ ಯುಎಇಯ ದಿರ್ಹಾಮ್ ಸೇರಿದಂತೆ ಪರ್ಯಾಯ ಪಾವತಿ ವ್ಯವಸ್ಥೆಗಳ ಮೂಲಕ ಪೂರೈಕೆಯನ್ನು ಸರಾಗಗೊಳಿಸಿವೆ. ಇದು ಭಾರತದ ರಸಗೊಬ್ಬರ ಕಾರ್ಖಾನೆಗಳು ಮತ್ತು ಕೈಗಾರಿಕೆಗಳ ಅನಿಲ ಕೊರತೆಯನ್ನು ಯಶಸ್ವಿಯಾಗಿ ನೀಗಿಸಿದೆ.

ರಷ್ಯಾದ ಈ ನಿರಂತರ ಮತ್ತು ರಿಯಾಯಿತಿ ದರದ ಪೂರೈಕೆಯು ಭಾರತದ ಬೃಹತ್ ಇಂಧನ ಕೊರತೆಯನ್ನು ಗಣನೀಯವಾಗಿ ನೀಗಿಸುವ ಜೊತೆಗೆ, ದೇಶದ ಹಣದುಬ್ಬರ ನಿಯಂತ್ರಣಕ್ಕೂ ಅತಿ ದೊಡ್ಡ ಮಟ್ಟದಲ್ಲಿ ನೆರವಾಗಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ 90 ರಿಂದ 100 ಡಾಲರ್ ಗಡಿ ದಾಟಿ ವಿಪರೀತವಾಗಿ ಏರಿಳಿತಗೊಂಡರೂ, ರಷ್ಯಾದ ಅಗ್ಗದ ತೈಲವು ಭಾರತದೊಳಗೆ ರಿಟೇಲ್ ಇಂಧನ ಬೆಲೆಗಳು ಗಗನಕ್ಕೇರದಂತೆ ತಡೆದಿದೆ. ದೇಶೀಯವಾಗಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ಸ್ಥಿರವಾಗಿರುವುದರಿಂದ, ದಿನಬಳಕೆಯ ಅಗತ್ಯ ವಸ್ತುಗಳ ಸಾಗಣೆ ವೆಚ್ಚವು ಸಂಪೂರ್ಣ ನಿಯಂತ್ರಣದಲ್ಲಿದೆ. ಇದು ಜನಸಾಮಾನ್ಯರ ಮೇಲಿನ ಜೀವನ ವೆಚ್ಚದ ಭಾರವನ್ನು ಗಣನೀಯವಾಗಿ ಕಡಿಮೆ ಮಾಡಿದೆ.

ಕೇವಲ ಹಣದುಬ್ಬರ ನಿಯಂತ್ರಣವಷ್ಟೇ ಅಲ್ಲದೆ, ರಷ್ಯಾದಿಂದ ಸಿಗುತ್ತಿರುವ ಈ ಬ್ಯಾರೆಲ್ ಒಂದಕ್ಕೆ ಅಂದಾಜು 10 ರಿಂದ 15 ಡಾಲರ್‌ನಷ್ಟು ಆಕರ್ಷಕ ರಿಯಾಯಿತಿಯಿಂದಾಗಿ, ಭಾರತದ ಬೊಕ್ಕಸಕ್ಕೆ ಸಾವಿರಾರು ಕೋಟಿ ರೂಪಾಯಿಗಳ ವಿದೇಶಿ ವಿನಿಮಯ ಉಳಿತಾಯವಾಗಿದೆ. ಇದಕ್ಕಿಂತ ಮಿಗಿಲಾಗಿ, ರಿಲಯನ್ಸ್ ಇಂಡಸ್ಟ್ರೀಸ್, ನಾಯರಾ ಎನರ್ಜಿ ಸೇರಿದಂತೆ ಭಾರತೀಯ ಖಾಸಗಿ ಮತ್ತು ಸರ್ಕಾರಿ ಸಂಸ್ಕರಣಾಗಾರಗಳು ರಷ್ಯಾದಿಂದ ಅತ್ಯಂತ ಅಗ್ಗದ ಕಚ್ಚಾ ತೈಲವನ್ನು ಬೃಹತ್ ಪ್ರಮಾಣದಲ್ಲಿ ತರಿಸಿಕೊಳ್ಳುತ್ತಿವೆ. ಆ ಕಚ್ಚಾ ತೈಲವನ್ನು ಸಂಸ್ಕರಿಸಿ. ಅದರಿಂದ ಉತ್ಪಾದಿಸಿದ ಡೀಸೆಲ್ ಮತ್ತು ವಿಮಾನ ಇಂಧನವನ್ನು (ಎಟಿಎಫ್) ಯುರೋಪ್ ಸೇರಿದಂತೆ ಪಾಶ್ಚಿಮಾತ್ಯ ದೇಶಗಳಿಗೇ ಮರಳಿ ರಫ್ತು ಮಾಡುತ್ತಿರುವುದರಿಂದ ದೇಶಕ್ಕೆ ಭಾರಿ ವಿದೇಶಿ ರಫ್ತು ಆದಾಯವೂ ಹರಿದುಬರುತ್ತಿದೆ.

ರಷ್ಯಾದ ಪೂರೈಕೆಯಿಂದ ಪ್ರಸ್ತುತದ ಇಂಧನ ಕೊರತೆ ಬಹಳ ಮಟ್ಟಿಗೆ ನೀಗಿದ್ದರೂ, ಭವಿಷ್ಯದ ಹಾದಿ ಸಂಪೂರ್ಣ ಸುಗಮವಾಗಿಲ್ಲ ಮತ್ತು ಸವಾಲುಗಳಿಂದ ಮುಕ್ತವಾಗಿಲ್ಲ. ರಷ್ಯಾದಿಂದ ತೈಲ ಖರೀದಿಸದಂತೆ ಹಾಗೂ ಜಿ7 ರಾಷ್ಟ್ರಗಳು ನಿಗದಿಪಡಿಸಿರುವ ಬೆಲೆ ಮಿತಿಯನ್ನು ಪಾಲಿಸುವಂತೆ ಅಮೆರಿಕ ಸೇರಿದಂತೆ ಪಾಶ್ಚಿಮಾತ್ಯ ರಾಷ್ಟ್ರಗಳು ಭಾರತದ ಮೇಲೆ ನಿರಂತರವಾಗಿ ರಾಜತಾಂತ್ರಿಕ ಒತ್ತಡಗಳನ್ನು ಹೇರುತ್ತಲೇ ಇವೆ. ಈ ಹಿನ್ನೆಲೆಯಲ್ಲಿ ಎಚ್ಚೆತ್ತಿರುವ ಭಾರತ, ತನ್ನ ಭವಿಷ್ಯದ ಇಂಧನ ಭದ್ರತೆಗಾಗಿ ಕೇವಲ ರಷ್ಯಾ ಅಥವಾ ಯಾವುದೇ ಒಂದು ದೇಶವನ್ನು ಅವಲಂಬಿಸದೆ, ತನ್ನ ಆಮದು ಮೂಲಗಳನ್ನು ಚಾಣಾಕ್ಷತನದಿಂದ ವೈವಿಧ್ಯಮಯಗೊಳಿಸುತ್ತಿದೆ. ಅಮೆರಿಕ, ವೆನೆಜುವಿಲಾ ಮತ್ತು ಸೌದಿ ಅರೇಬಿಯಾ ಕಡೆಗೂ ತನ್ನ ಮಾರುಕಟ್ಟೆಯನ್ನು ವಿಸ್ತರಿಸಿಕೊಳ್ಳುವ ಮೂಲಕ ಅಪಾಯವನ್ನು ಸಮತೋಲನ ಮಾಡುತ್ತಿದೆ.

ರಷ್ಯಾದ ತೈಲ ಮತ್ತು ಅನಿಲ ಪೂರೈಕೆಯು ಇಂಧನ ಬಿಕ್ಕಟ್ಟಿನ ಈ ಕಠಿಣ ಸಮಯದಲ್ಲಿ ಭಾರತದ ಆರ್ಥಿಕತೆಯ ಪಾಲಿಗೆ ಅಕ್ಷರಶಃ ಜೀವದಾನ ನೀಡಿದೆ. ಮುಂದಿನ ದಿನಗಳಲ್ಲೂ ಪಾಶ್ಚಿಮಾತ್ಯ ದೇಶಗಳ ನಿರಂತರ ಟೀಕೆಗಳನ್ನು ಮತ್ತು ಒತ್ತಡಗಳನ್ನು ದಿಟ್ಟವಾಗಿ ಬದಿಗಿಟ್ಟು, ತನ್ನ 140 ಕೋಟಿ ಜನರ ಆರ್ಥಿಕ ಹಿತದೃಷ್ಟಿಗೆ ಹಾಗೂ ದೇಶದ ಸಾರ್ವಭೌಮತೆಗೆ ಇದೇ ರೀತಿಯ ಸ್ವತಂತ್ರ ಮತ್ತು ರಾಷ್ಟ್ರೀಯ ಹಿತಾಸಕ್ತಿ ಆಧಾರಿತ ಸಮತೋಲಿತ ಹೆಜ್ಜೆಗಳು ಭಾರತವನ್ನು ಜಾಗತಿಕ ಇಂಧನ ಬಿಕ್ಕಟ್ಟಿನಿಂದ ಸುರಕ್ಷಿತವಾಗಿ ಪಾರು ಮಾಡಲಿವೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR